ಸಂಪುಟ : 11 ಸಂಚಿಕೆ: 128 ಪುಟ : 4+2 ಬೆಲೆ: 3.00 ರವಿವಾರ ಜೂನ್ 21 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 128 Pages : 4+2 Price : 3.00 Sunday june 21 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಮುಂಡರಗಿ ತಾಲೂಕು ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ 2026–27ನೇ ಸಾಲಿನ ಖಾಲಿ ಇರುವ 08 ಅಂಗನವಾಡಿ ಕಾರ್ಯಕರ್ತೆ ಹುದ್ದೆಗಳು ಹಾಗೂ 22 ಅಂಗನವಾಡಿ ಸಹಾಯಕಿಯರ ಹುದ್ದೆಗಳನ್ನು ಗೌರವ ಸೇವೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ಜುಲೈ 30, 2026ರೊಳಗಾಗಿ ಸಲ್ಲಿಸಬೇಕು. ಅರ್ಜಿಗಳನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ತಾಲೂಕು ಬಾಲಭವನ ಕಟ್ಟಡ, ವಲಯ ಅರಣ್ಯಾಧಿಕಾರಿಗಳ ಕಚೇರಿ ಪಕ್ಕ, ಹಳೆ ಕಲಕೇರಿ ರಸ್ತೆ, ಮುಂಡರಗಿ ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮುಂಡರಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ: 08371–200050.

## ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನಲ್ಲಿ ಖಾಲಿ ಇರುವ 07 ಅಂಗನವಾಡಿ ಕಾರ್ಯಕರ್ತೆ ಹಾಗೂ 41 ಅಂಗನವಾಡಿ ಸಹಾಯಕಿಯರ ಹುದ್ದೆಗಳನ್ನು ಗೌರವ ಸೇವೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಜುಲೈ 30, 2026ರ ಸಂಜೆ 5.30 ಗಂಟೆಯೊಳಗೆ ಅರ್ಜಿಗಳನ್ನು ಸಲ್ಲಿಸಬೇಕು. ಅರ್ಜಿಗಳನ್ನು ಭೌತಿಕವಾಗಿ ಮಾತ್ರ ಸಲ್ಲಿಸಲು ಅವಕಾಶವಿದ್ದು, ಅಂಚೆ ಅಥವಾ ಕೋರಿಯರ್ ಮೂಲಕ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಅರ್ಜಿಗಳನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಜಿಲ್ಲಾ ಬಾಲಕರ ಬಾಲ ಮಂದಿರ ಆವರಣ, ಬದಾಮಿ ರಸ್ತೆ ಹಾಕಿ ಮೈದಾನ ಸಮೀಪ, ಬೆಟಗೇರಿ–ಗದಗ ವಿಳಾಸಕ್ಕೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ 08372–238823 ದೂರವಾಣಿ ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿಎಂ ಕಿಸಾನ್ 23ನೇ ಕಂತು ಬಿಡುಗಡೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ (ಪಿಎಂ–ಕಿಸಾನ್) ಯೋಜನೆಯ 23ನೇ ಕಂತಿನ ಹಣವನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಶನಿವಾರ ಬಿಡುಗಡೆ ಮಾಡಿದರು. ಪಶ್ಚಿಮ ಬಂಗಾಳದ ಹೂಗ್ಲಿ ಜಿಲ್ಲೆಯ ತಾರಕೇಶ್ವರದಲ್ಲಿ ನಡೆದ ಕಾರ್ಯಕ್ರಮದಲ್ಲಿ ದೇಶದಾದ್ಯಂತದ ಫಲಾನುಭವಿ ರೈತರ ಖಾತೆಗಳಿಗೆ ನೇರ ನಗದು ವರ್ಗಾವಣೆ (ಡಿಬಿಟಿ) ಮೂಲಕ ಹಣ ಜಮೆ ಮಾಡುವ ಪ್ರಕ್ರಿಯೆಗೆ ಚಾಲನೆ ನೀಡಲಾಯಿತು. ಈ ಕಂತಿನಡಿ ಕರ್ನಾಟಕ ರಾಜ್ಯದ 41,54,160 ರೈತರಿಗೆ ಒಟ್ಟು ₹830.83 ಕೋಟಿ ಆರ್ಥಿಕ ನೆರವು ಜಮೆಯಾಗಿದ್ದು, ರಾಜ್ಯದ ಲಕ್ಷಾಂತರ ರೈತ ಕುಟುಂಬಗಳಿಗೆ ಕೃಷಿ ಚಟುವಟಿಕೆಗಳಿಗೆ ಅಗತ್ಯವಾದ ಆರ್ಥಿಕ ಬೆಂಬಲ ದೊರೆತಿದೆ. ಪಿಎಂ–ಕಿಸಾನ್ ಯೋಜನೆಯಡಿ ಅರ್ಹ ರೈತ ಕುಟುಂಬಗಳಿಗೆ ವಾರ್ಷಿಕ ₹6,000 ನೆರವು ನೀಡಲಾಗುತ್ತಿದ್ದು, ಈ ಮೊತ್ತವನ್ನು ತಲಾ ₹2,000ರಂತೆ ಮೂರು ಕಂತುಗಳಲ್ಲಿ ನೇರವಾಗಿ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುತ್ತಿದೆ.

ಕೃಷಿ ಚಟುವಟಿಕೆಗಳ ನಿರ್ವಹಣೆ, ಬೀಜ, ರಸಗೊಬ್ಬರ ಹಾಗೂ ಇತರೆ ಕೃಷಿ ವೆಚ್ಚಗಳನ್ನು ಭರಿಸಲು ಈ ನೆರವು ಸಹಕಾರಿಯಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

### ಮೂರು ವರ್ಷಗಳ ಬಳಿಕ ಅನರ್ಹರ ನೆಪ ಏಕೆ? ಶಾಸಕ ಸಿ.ಸಿ. ಪಾಟೀಲ ಪ್ರಶ್ನೆ

# ಗೃಹಲಕ್ಷ್ಮಿ ಗೊಂದಲಕ್ಕೆ ಸರ್ಕಾರವೇ ಕಾರಣ

■ವಿಜಯಸಾಕ್ಷಿ ಸುದ್ದಿ, ಗದಗ

ಗೃಹಲಕ್ಷ್ಮಿ ಯೋಜನೆಯ ಪರಿಷ್ಕರಣೆ ಹೆಸರಿನಲ್ಲಿ ರಾಜ್ಯ ಸರ್ಕಾರ ಮಹಿಳೆಯರಿಗೆ ಅನ್ಯಾಯ ಮಾಡುತ್ತಿದ್ದು, ಯೋಜನೆಯಲ್ಲಿನ ಗೊಂದಲಗಳು ರಾಜ್ಯದ ಹದಗೆಟ್ಟ ಆರ್ಥಿಕ ಪರಿಸ್ಥಿತಿಗೆ ಸಾಕ್ಷಿಯಾಗಿವೆ ಎಂದು ನರಗುಂದ ಶಾಸಕ ಸಿ.ಸಿ. ಪಾಟೀಲ ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗೃಹಲಕ್ಷ್ಮಿ ಯೋಜನೆಯಲ್ಲಿ ಅನರ್ಹರು ಇದ್ದಾರೆ ಎಂದು ಸರ್ಕಾರ ಹೇಳುತ್ತಿದೆ. ಆದರೆ ಯೋಜನೆಯನ್ನು ಜಾರಿಗೆ ತಂದಿದ್ದು ಇದೇ ಸರ್ಕಾರ. ಕಳೆದ ಮೂರು ವರ್ಷಗಳಿಂದ ಅನರ್ಹರಿಗೆ ಹಣ ಹೋಗಿದ್ದರೆ ಅದಕ್ಕೆ ಯಾರು ಹೊಣೆ ಎಂದು ಪ್ರಶ್ನಿಸಿದರು.

ರಾಜ್ಯದ ಬೊಕ್ಕಸವನ್ನು ತಾವೇ ಹಾಳು ಮಾಡಿ ಈಗ ಆರ್ಥಿಕ ಪರಿಸ್ಥಿತಿಯ ಬಗ್ಗೆ ಮಾತನಾಡುತ್ತಿರುವುದು ಹಾಸ್ಯಾಸ್ಪದ. ಗೃಹಲಕ್ಷ್ಮಿ ಯೋಜನೆಗೆ ಮೀಸಲಿಟ್ಟಿರುವ 5 ಸಾವಿರ ಕೋಟಿ ರೂ. ಕುರಿತು ಸರ್ಕಾರ ಇದುವರೆಗೂ ಸ್ಪಷ್ಟ ಲೆಕ್ಕ ನೀಡಿಲ್ಲ. ವಿಧಾನಸಭೆಯಲ್ಲಿ ಶಾಸಕರು ಪ್ರಶ್ನೆ ಕೇಳಿದರೂ ಉತ್ತರಿಸುವ ಧೈರ್ಯ ಸರ್ಕಾರಕ್ಕಿಲ್ಲ ಎಂದು ಆರೋಪಿಸಿದರು.

ವಿಧಾನಸಭೆಯಲ್ಲಿ ನೂರಾರು ಸಿಬ್ಬಂದಿಯನ್ನು ದಿಢೀರ್ ಕಡಿತಗೊಳಿಸಿರುವ ಕ್ರಮದ ವಿರುದ್ಧ ಆಕ್ಷೇಪ ವ್ಯಕ್ತಪಡಿಸಿದ ಅವರು, ಸಿಬ್ಬಂದಿಗೆ ಕೆಲಸವಿರಲಿಲ್ಲ



ಎನ್ನುವುದಾದರೆ ಇಷ್ಟು ವರ್ಷಗಳ ಕಾಲ ಅವರು ಏನು ಮಾಡುತ್ತಿದ್ದರು ಎಂದು ಪ್ರಶ್ನಿಸಿದರು. ಇದು ಸಾರ್ವಜನಿಕರ ತೆರಿಗೆ ಹಣದ ಲೂಟಿ ಅಲ್ಲದೇ ಮತ್ತೇನು ಎಂದು ಟೀಕಿಸಿದರು.

ರಾಜ್ಯದ ಹಲವು ಸಚಿವರು ತಮ್ಮ ಖಾತೆಗಳ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸುತ್ತಿಲ್ಲ. ಒಬ್ಬ ಸಚಿವರು ನೀರಾವರಿ ಖಾತೆ ಬೇಡ ಎನ್ನುತ್ತಾರೆ, ಮತ್ತೊಬ್ಬರು ಬೇರೆ ಖಾತೆ ಕೇಳುತ್ತಿದ್ದಾರೆ. ಕೇವಲ 12 ಸಚಿವರನ್ನು ಇಟ್ಟುಕೊಂಡೇ ಇಷ್ಟೊಂದು ಸಮಸ್ಯೆಗಳು ಸೃಷ್ಟಿಯಾಗಿವೆ. ಉಳಿದ ಖಾತೆಗಳ ಹಂಚಿಕೆ ಬಳಿಕ ಇನ್ನಷ್ಟು ಗೊಂದಲಗಳು ಉಂಟಾಗಲಿವೆ ಎಂದು ಲೇವಡಿ ಮಾಡಿದರು.

### ಅಡ್ಡ ಮತದಾನ ಪ್ರಕರಣ

ಅಡ್ಡ ಮತದಾನದ ಪ್ರಕರಣದ ಕುರಿತು ಸತ್ಯಶೋಧನಾ ಸಮಿತಿ ತನಿಖೆ ನಡೆಸುತ್ತಿದ್ದು, ವರದಿ ಬಂದ ಬಳಿಕ ನೈಜತೆ ಹೊರಬರಲಿದೆ. ಪಕ್ಷಕ್ಕೆ ದ್ರೋಹ ಮಾಡಿದವರ ವಿರುದ್ಧ ವರಿಷ್ಠರು ಕಠಿಣ ಕ್ರಮ ಕೈಗೊಳ್ಳಲಿದ್ದಾರೆ ಎಂದು ಸಿ.ಸಿ. ಪಾಟೀಲ ಸ್ಪಷ್ಟಪಡಿಸಿದರು.

**ಪ್ರಿಯಾಂಕ್ ಖರ್ಗೆಗೆ ತಿರುಗೇಟು :** ಆರ್‌ಎಸ್‌ಎಸ್ ಕುರಿತು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಬರೆದ ಪತ್ರದ ಬಗ್ಗೆ ಪ್ರತಿಕ್ರಿಯಿಸಿದ ಸಿ.ಸಿ. ಪಾಟೀಲ, ಆರ್‌ಎಸ್‌ಎಸ್ ಇಂತಹ ನೂರಾರು ಗೃಹ ಸಚಿವರನ್ನು ನೋಡಿದೆ. ಸ್ವತಃ ಜವಾಹರಲಾಲ್ ನೆಹರೂ ಅವರೇ ಆರ್‌ಎಸ್‌ಎಸ್ ವೇಷಭೂಷಣದಲ್ಲಿ ಹಲವು ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದರು. ಮೊದಲು ಪ್ರಿಯಾಂಕ್ ಖರ್ಗೆ ಅವರು ಗೃಹ ಸಚಿವರಾಗಿ ರಾಜ್ಯದಲ್ಲಿ ಹೆಚ್ಚುತ್ತಿರುವ ಓಸಿ, ಮಟ್ಕಾ, ಡ್ರಗ್ಸ್ ದಂಧೆ ಹಾಗೂ ಬೆಂಗಳೂರಿನಲ್ಲಿ ತಡರಾತ್ರಿವರೆಗೆ ನಡೆಯುವ ಬಾರ್–ಪಬ್‌ಗಳ ಹಾವಳಿ ತಡೆಯುವತ್ತ ಗಮನ ಹರಿಸಲಿ ಎಂದು ಹೇಳಿದರು.

> "ಗೃಹಲಕ್ಷ್ಮಿ ಯೋಜನೆಯಲ್ಲಿ ಅನರ್ಹರಿಗೆ ಹಣ ಹೋಗಿದೆ ಎಂದು ಸರ್ಕಾರವೇ ಒಪ್ಪಿಕೊಳ್ಳುತ್ತಿದೆ. ಹಾಗಿದ್ದರೆ ಮೂರು ವರ್ಷಗಳ ಕಾಲ ಯೋಜನೆ ಜಾರಿಗೊಳಿಸಿದವರ ಹೊಣೆಗಾರಿಕೆ ಏನು? ಮಹಿಳೆಯರಿಗೆ ಅನ್ಯಾಯ ಮಾಡುವ ಯಾವುದೇ ಪರಿಷ್ಕರಣೆಗಳನ್ನು ನಾವು ಒಪ್ಪುವುದಿಲ್ಲ."
> – **ಸಿ.ಸಿ. ಪಾಟೀಲ,** ನರಗುಂದ ಶಾಸಕ

ಸುದ್ದಿಗೋಷ್ಠಿಯಲ್ಲಿ ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಲಿಂಗರಾಜ ಪಾಟೀಲ, ಎಂ.ಎಂ. ಹಿರೇಮಠ, ಎಂ.ಎಸ್. ಕರಿಗೌಡ್ರ, ಉಷಾ ದಾಸರ, ಅನಿಲ ಅಬ್ಬಿಗೇರಿ ಸೇರಿದಂತೆ ಬಿಜೆಪಿ ಮುಖಂಡರು ಉಪಸ್ಥಿತರಿದ್ದರು.

### ನಿತ್ಯ ಯೋಗಾಭ್ಯಾಸದಿಂದ ರೋಗಮುಕ್ತ ಜೀವನ ಸಾಧ್ಯ : ಸಂಕನೂರು

# ಯೋಗವೇ ಆರೋಗ್ಯದ ಅಡಿಪಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಯೋಗವು ಕೇವಲ ದೈಹಿಕ ಕಸರತ್ತು ಅಥವಾ ವ್ಯಾಯಾಮವಲ್ಲ. ಅದು ದೇಹ, ಮನಸ್ಸು ಮತ್ತು ಆತ್ಮದ ಸಮತೋಲನ ಕಾಪಾಡುವ ಮಹಾನ್ ವಿಜ್ಞಾನವಾಗಿದ್ದು, ಆರೋಗ್ಯ ರಕ್ಷಣೆ ಮತ್ತು ದೀರ್ಘಾಯುಷ್ಯಕ್ಕಾಗಿ ಪ್ರತಿಯೊಬ್ಬರೂ ನಿತ್ಯ ಯೋಗಾಭ್ಯಾಸ ಮಾಡುವುದು ಅತ್ಯಗತ್ಯ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ, ವಿವಿಧ ಸರ್ಕಾರಿ ಇಲಾಖೆಗಳು ಹಾಗೂ ಸರ್ವಯೋಗ ಸಂಸ್ಥೆಗಳ ಸಹಯೋಗದಲ್ಲಿ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ–2026 ಅಂಗವಾಗಿ "ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ" ಎಂಬ ಘೋಷವಾಕ್ಯದಡಿ ಶನಿವಾರ ಮುನ್ಸಿಪಲ್ ಕಾಲೇಜು ಆವರಣದಲ್ಲಿ ಆಯೋಜಿಸಿದ್ದ ಜನಜಾಗೃತಿ ಜಾಥಾಕ್ಕೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಭಾರತದ ಋಷಿಮುನಿಗಳು, ವಿಶೇಷವಾಗಿ ಮಹರ್ಷಿ ಪತಂಜಲಿ ಅವರು ಜಗತ್ತಿಗೆ ನೀಡಿರುವ ಯೋಗ ಎಂಬ ಅಮೂಲ್ಯ ಕೊಡುಗೆಯನ್ನು ಪ್ರತಿಯೊಬ್ಬರೂ




ಜೀವನದ ಭಾಗವಾಗಿಸಿಕೊಳ್ಳಬೇಕು. ಆರೋಗ್ಯಕರ ಬದುಕಿಗಾಗಿ ದಿನದ 24 ಗಂಟೆಗಳಲ್ಲಿ ಕನಿಷ್ಠ ಅರ್ಧ ಗಂಟೆಯಿಂದ ಒಂದು ಗಂಟೆಯವರೆಗೆ ಯೋಗಾಭ್ಯಾಸಕ್ಕೆ ಮೀಸಲಿಡಬೇಕು ಎಂದು ಸಲಹೆ ನೀಡಿದರು.

ಯೋಗವನ್ನು ಜಾಗತಿಕ ಮಟ್ಟದಲ್ಲಿ ಪರಿಚಯಿಸುವಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಪಾತ್ರ ಮಹತ್ವದ್ದಾಗಿದೆ. 2014ರಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಯೋಗದ ಮಹತ್ವವನ್ನು ಪ್ರತಿಪಾದಿಸಿದ ಬಳಿಕ ವಿಶ್ವದಾದ್ಯಂತ ಯೋಗ ದಿನಾಚರಣೆಗೆ ಮಾನ್ಯತೆ ದೊರೆತಿದ್ದು, ಇಂದು ಅದು ಜಾಗತಿಕ ಆರೋಗ್ಯ ಚಳವಳಿಯಾಗಿ ಬೆಳೆದಿದೆ ಎಂದು ಹೇಳಿದರು.

ಮುನ್ಸಿಪಲ್ ಕಾಲೇಜು ಆವರಣದಿಂದ ಆರಂಭವಾದ ಜಾಥಾವು ಗಾಂಧಿ ಸರ್ಕಲ್, ರೋಟರಿ ಸರ್ಕಲ್, ಹಳೆ ಬಸ್ ನಿಲ್ದಾಣ, ಟಾಂಗಾ ಕೂಟ, ಮಹೇಂದ್ರಕರ ಸರ್ಕಲ್, ಶಹಪೂರ ಪೇಟೆ ಮಾರ್ಗವಾಗಿ ಸಂಚರಿಸಿ ಮತ್ತೆ ಮುನ್ಸಿಪಲ್ ಕಾಲೇಜು ಆವರಣಕ್ಕೆ ತಲುಪಿತು.

### ಯೋಗದ ಮಹತ್ವ ಸಾರಿದ ವಿದ್ಯಾರ್ಥಿಗಳು

ರೋಣ ಆಯುರ್ವೇದ ಕಾಲೇಜು ಹಾಗೂ ಬಿದರೂರು ಆಯುರ್ವೇದ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಯೋಗ ಜಾಗೃತಿ ಘೋಷಣೆಗಳನ್ನು ಕೂಗಿ ಸಾರ್ವಜನಿಕರ ಗಮನ ಸೆಳೆದರು. "ಯೋಗ ಮಾಡಿ ರೋಗ ಓಡಿಸಿ" ಎಂಬ ಸಂದೇಶ ಜಾಥಾದ ಪ್ರಮುಖ ಆಕರ್ಷಣೆಯಾಗಿತ್ತು.

> "ಇಂದಿನ ಆಧುನಿಕ ಬದುಕಿನಲ್ಲಿ ಅಧಿಕಾರ, ಅಂತಸ್ತು, ಸಂಪತ್ತಿಗಿಂತ ಆರೋಗ್ಯವೇ ದೊಡ್ಡ ಸಂಪತ್ತು. ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಪ್ರತಿಯೊಬ್ಬರೂ ಪ್ರತಿದಿನ ಯೋಗಾಭ್ಯಾಸ ಮಾಡಬೇಕು."
> – **ಎಸ್.ವಿ. ಸಂಕನೂರು,** ವಿಧಾನ ಪರಿಷತ್ ಸದಸ್ಯರು

ಕಾರ್ಯಕ್ರಮದಲ್ಲಿ ಜಿಲ್ಲಾ ಆಯುಷ್ ಅಧಿಕಾರಿ ಡಾ. ಜುಬೇದಾ ಬೇಗಂ ತಿಗಳೇರ, ಆಯುಷ್ ವೈದ್ಯಾಧಿಕಾರಿಗಳ ಸಂಘದ ಅಧ್ಯಕ್ಷ ಡಾ. ಸಂಜೀವ ನಾರಪ್ಪನವರ, ಬ್ರಹ್ಮಕುಮಾರಿ ಪ್ರತಿನಿಧಿಗಳು, ಸಂಘದ ಕಾರ್ಯದರ್ಶಿ ಡಾ. ಬಿ.ಎಂ. ಲೋಕಪುರಿ, ಡಾ. ಎಂ.ಎಂ. ಹಾದಿಮನಿ, ಡಾ. ಸಾಯಿಪ್ರಕಾಶ, ಆಡಳಿತಾಧಿಕಾರಿ ಸುಧಾ ಜಾಲಿಹಾಳ, ಆಯುರ್ವೇದ ಕಾಲೇಜಿನ ಡಾ. ಕೊಟ್ರು ಶೆಟ್ರು, ಆರೋಗ್ಯ ಇಲಾಖೆಯ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರ, ವಿವಿಧ ಯೋಗ ಸಂಸ್ಥೆಗಳ ಪ್ರತಿನಿಧಿಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಲಕ್ಷ್ಮೇಶ್ವರ ಸಮೀಪ ಭೀಕರ ರಸ್ತೆ ಅಪಘಾತ; ಅಕ್ಕ–ತಮ್ಮ ಬಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣ ಪೊಲೀಸ್ ಠಾಣೆ ವ್ಯಾಪ್ತಿಯ ಗೋನಾಳ ಗ್ರಾಮದ ಸಮೀಪದ ಸಂಕ್ಲಿಪುರ ಕ್ರಾಸ್ ಬಳಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಅಕ್ಕ ಮತ್ತು ತಮ್ಮ ದಾರುಣವಾಗಿ ಮೃತಪಟ್ಟ ಘಟನೆ ಶುಕ್ರವಾರ ನಡೆದಿದೆ.

ಸವಣೂರ ಕಡೆಯಿಂದ ಲಕ್ಷ್ಮೇಶ್ವರದತ್ತ ಅತಿವೇಗವಾಗಿ ಬರುತ್ತಿದ್ದ ಐಶರ್/ಕ್ಯಾಂಟರ್ ವಾಹನವು ಸಂಕ್ಲಿಪುರ ಕ್ರಾಸ್‌ನಿಂದ ಸವಣೂರ ರಸ್ತೆಯತ್ತ ತೆರಳುತ್ತಿದ್ದ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ.

ಅಪಘಾತದ ತೀವ್ರತೆಗೆ ಬೈಕ್ ಹಿಂಬದಿಯಲ್ಲಿ ಕುಳಿತಿದ್ದ ಕುಂದಗೋಳ ತಾಲೂಕಿನ ಕಡಪಟ್ಟಿಹಳ್ಳಾಳ ಗ್ರಾಮದ ಗೌರವ್ವ ಯಲ್ಲಪ್ಪ ಬಾರ್ಕಿ (43) ಅವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡ ಬೈಕ್




ಚಾಲಕ ಫಕೀರೇಶ ಬಾರ್ಕಿ (40) ಅವರನ್ನು ತಕ್ಷಣ ಲಕ್ಷ್ಮೇಶ್ವರ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ನೀಡಲಾಯಿತು. ಬಳಿಕ ಹೆಚ್ಚಿನ ಚಿಕಿತ್ಸೆಗೆ ಗದಗ ಜಿಮ್ಸ್ ಆಸ್ಪತ್ರೆಗೆ ಕರೆದೊಯ್ಯುವ ವೇಳೆ ದಾರಿ ಮಧ್ಯೆ ಕೊನೆಯುಸಿರೆಳೆದರು.

ಒಂದೇ ಕುಟುಂಬದ ಅಕ್ಕ–ತಮ್ಮ ರಸ್ತೆ ಅಪಘಾತದಲ್ಲಿ ಮೃತಪಟ್ಟಿರುವುದು ಕುಟುಂಬಸ್ಥರ ಆಕ್ರಂದನಕ್ಕೆ ಕಾರಣವಾಗಿದ್ದು, ಗ್ರಾಮದಲ್ಲಿ ಶೋಕದ ವಾತಾವರಣ ನಿರ್ಮಾಣವಾಗಿದೆ.

ಮೃತರ ತಂದೆ ನೀಡಿದ ದೂರಿನ ಮೇರೆಗೆ ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪಿಎಸ್‌ಐ ನಾಗರಾಜ ಗಡದ ತನಿಖೆ ಕೈಗೊಂಡಿದ್ದಾರೆ.

### ಜಂಗ್ಲಿ ಅವರ ಸೇವೆ ಶಿಕ್ಷಕರ ಸಮುದಾಯಕ್ಕೆ ಸದಾ ಸ್ಮರಣೀಯ ಎಂದ ಬಸವರಾಜ ಬಳ್ಳಾರಿ

# ಶಿಕ್ಷಕರ ನಾಯಕರಿಗೆ ಗೌರವದ ವಿದಾಯ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಹುಬ್ಬಳ್ಳಿ ಘಟಕದ ಅಧ್ಯಕ್ಷರು ಹಾಗೂ ಸಂಘಟನಾ ಚತುರರೆಂದೇ ಗುರುತಿಸಿಕೊಂಡಿರುವ ಎಂ.ಎಚ್. ಜಂಗ್ಲಿ ಅವರು ನಿವೃತ್ತಿ ಹೊಂದಿದ ಹಿನ್ನೆಲೆಯಲ್ಲಿ ಅವರನ್ನು ಗೌರವಪೂರ್ವಕವಾಗಿ ಸನ್ಮಾನಿಸಿ ಬೀಳ್ಕೊಡಲಾಯಿತು. ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷರು ಹಾಗೂ ಗದಗ ಜಿಲ್ಲಾ ಘಟಕದ ಅಧ್ಯಕ್ಷರಾದ ಬಸವರಾಜ ವೆಂಕಪ್ಪ ಬಳ್ಳಾರಿ ಅವರು ಜಂಗ್ಲಿಯವರನ್ನು ಸನ್ಮಾನಿಸಿ ಮಾತನಾಡಿ, ಶಿಕ್ಷಕರ ಸಂಘಟನೆ ಹಾಗೂ ಶೈಕ್ಷಣಿಕ ಕ್ಷೇತ್ರದ ಅಭಿವೃದ್ಧಿಗೆ ಅವರು ಸಲ್ಲಿಸಿರುವ ಸೇವೆ ಅನನ್ಯವಾಗಿದೆ ಎಂದು ಶ್ಲಾಘಿಸಿದರು.

ಜಂಗ್ಲಿಯವರು ತಮ್ಮ ಸೇವಾವಧಿಯಲ್ಲಿ ಶಿಕ್ಷಕರ ಹಿತಾಸಕ್ತಿಗಳ ರಕ್ಷಣೆಗಾಗಿ ನಿರಂತರವಾಗಿ ಶ್ರಮಿಸಿದ್ದು, ಸಂಘಟನಾತ್ಮಕ ಚಟುವಟಿಕೆಗಳ ಮೂಲಕ ಶಿಕ್ಷಕರ ಸಮುದಾಯದ ವಿಶ್ವಾಸ



ಗಳಿಸಿದ್ದಾರೆ. ಅವರ ನಿಸ್ವಾರ್ಥ ಸೇವಾ ಮನೋಭಾವ ಹಾಗೂ ನಾಯಕತ್ವ ಗುಣಗಳು ಇತರರಿಗೆ ಮಾದರಿಯಾಗಿವೆ ಎಂದು ಹೇಳಿದರು. ನಿವೃತ್ತಿ ಜೀವನವು ಜಂಗ್ಲಿಯವರಿಗೆ ಆರೋಗ್ಯ, ನೆಮ್ಮದಿ, ಸಂತೋಷ ಹಾಗೂ ಸಮೃದ್ಧಿಯನ್ನು ತರಲಿ ಎಂದು ಹಾರೈಸಿದರು. ಕಾರ್ಯಕ್ರಮದಲ್ಲಿ ರಾಜು ಕಂಟಿಗೊಣ್ಣವರ, ಪ್ರಲ್ಹಾದ ಗೆಜ್ಜಿ, ಅಮೀರನಾಯಕ, ಮುತ್ತು ಮಲಕಶೆಟ್ಟಿ, ರಾಜು ನರಗುಂದ, ಕರೀಮಸಾಬ ಸುಣಗಾರ, ಎಸ್.ಎಸ್. ಪಾರ್ವತಿಮಠ, ರಾಜಕುಮಾರ ಸೊಪಡ್ಲ, ಎಸ್.ಎಚ್. ಬಾದನಹಟ್ಟಿ ಸೇರಿದಂತೆ ಅನೇಕರು ಉಪಸ್ಥಿತರಿದ್ದು, ಜಂಗ್ಲಿಯವರಿಗೆ ಶುಭ ಹಾರೈಕೆಗಳನ್ನು ಸಲ್ಲಿಸಿದರು.

> "ಶಿಕ್ಷಕರ ಹಕ್ಕುಗಳ ರಕ್ಷಣೆ ಹಾಗೂ ಸಂಘಟನೆಯ ಬಲವರ್ಧನೆಗೆ ಎಂ.ಎಚ್. ಜಂಗ್ಲಿಯವರ ಕೊಡುಗೆ ಗಮನಾರ್ಹವಾಗಿದೆ. ಅವರ ಸೇವೆ ಶಿಕ್ಷಕರ ಸಮುದಾಯಕ್ಕೆ ಸದಾ ಸ್ಮರಣೀಯ."
> – **ಬಸವರಾಜ ವೆಂಕಪ್ಪ ಬಳ್ಳಾರಿ, ರಾಜ್ಯ ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ**

## ಸಿಎ ಪರೀಕ್ಷೆಯಲ್ಲಿ ರೋಹನ ಜೋಗಿನ ಯಶಸ್ಸು



■ವಿಜಯಸಾಕ್ಷಿ ಸುದ್ದಿ, ಗದಗ

ಮೇ 2026ರಲ್ಲಿ ನಡೆದ ಇನ್‌ಸ್ಟಿಟ್ಯೂಟ್ ಆಫ್ ಚಾರ್ಟರ್ಡ್ ಅಕೌಂಟೆಂಟ್ಸ್ ಆಫ್ ಇಂಡಿಯಾ (ಐಸಿಎಐ) ನಡೆಸಿದ ಚಾರ್ಟರ್ಡ್ ಅಕೌಂಟೆಂಟ್ (ಸಿಎ) ಪರೀಕ್ಷೆಯಲ್ಲಿ ನಗರದ ಒಕ್ಕಲಗೇರಿ ಓಣಿಯ ರೋಹನ ರವಿ ಜೋಗಿನ ಅವರು ಮೊದಲ ಪ್ರಯತ್ನದಲ್ಲೇ ಉತ್ತೀರ್ಣರಾಗುವ ಮೂಲಕ ಗಮನಾರ್ಹ ಸಾಧನೆ ಮಾಡಿದ್ದಾರೆ.

ಕೆಇಬಿಯ ಪ್ರಥಮ ದರ್ಜೆ ಗುತ್ತಿಗೆದಾರ ರವಿ ಜೋಗಿನ ಅವರ ಪುತ್ರರಾಗಿರುವ ರೋಹನ, ತಮ್ಮ ನಿರಂತರ ಪರಿಶ್ರಮ ಮತ್ತು ಶ್ರದ್ಧೆಯಿಂದ ಈ ಯಶಸ್ಸು ಸಾಧಿಸಿದ್ದಾರೆ.

ಅವರು ತಮ್ಮ ಎಸ್‌ಎಸ್‌ಎಲ್‌ಸಿ ಶಿಕ್ಷಣವನ್ನು ನಗರದ ಕೆ.ಎಲ್.ಇ. ಪ್ರೌಢಶಾಲೆಯಲ್ಲಿ ಹಾಗೂ ಪಿಯುಸಿ ಶಿಕ್ಷಣವನ್ನು ಎ.ಎಸ್.ಎಸ್. ಕಾಲೇಜುನಲ್ಲಿ ಪೂರ್ಣಗೊಳಿಸಿ, ಬಳಿಕ ಸಿಎ ವ್ಯಾಸಂಗದಲ್ಲಿ ತೊಡಗಿಸಿಕೊಂಡಿದ್ದರು. ದೇಶದ ಅತ್ಯಂತ ಸವಾಲಿನ ವೃತ್ತಿಪರ ಪರೀಕ್ಷೆಗಳಲ್ಲಿ ಒಂದಾದ ಸಿಎ ಪರೀಕ್ಷೆಯನ್ನು ಮೊದಲ ಪ್ರಯತ್ನದಲ್ಲೇ ತೇರ್ಗಡೆ ಹೊಂದಿರುವ ರೋಹನ ಅವರ ಸಾಧನೆಗೆ ಗುರು-ಹಿರಿಯರು, ಕುಟುಂಬ ಸದಸ್ಯರು, ಸ್ನೇಹಿತರು ಹಾಗೂ ಹಿತೈಷಿಗಳು ಅಭಿನಂದನೆ ಸಲ್ಲಿಸಿ ಶುಭ ಹಾರೈಸಿದ್ದಾರೆ.

## ಅಪ್ಪನ ಪ್ರೀತಿಗೆ ಬೆಲೆ ಕಟ್ಟಲಾಗುವುದಿಲ್ಲ

**(ಜೂನ್ 21 – ವಿಶ್ವ ಅಪ್ಪಂದಿರ ದಿನಾಚರಣೆ ಪ್ರಯುಕ್ತ)**

ಜೀವನದಿ ಅದೆಷ್ಟು ಮುಂದೆ ಸಾಗಿದರೂ
ಹಿಂದೆ ನಡೆದು ಬಂದ ದಾರಿ ಮರೆಯಲಾಗುವುದಿಲ್ಲ,
ಅದೆಷ್ಟು ದೊಡ್ಡವರಾಗಿ ಬೆಳೆದರೂ
ಅಪ್ಪನ ಪ್ರೀತಿಗೆ ಬೆಲೆ ಕಟ್ಟಲಾಗುವುದಿಲ್ಲ.




ಸಿಡುಕು ಸ್ವಭಾವದಲ್ಲಿಯೂ ಪ್ರೀತಿ,
ಮುನಿಸಿನಲ್ಲಿಯೂ ಆತ್ಮೀಯತೆ,
ಕಷ್ಟ ಪರಿಸ್ಥಿತಿಯಲ್ಲಿಯೂ ಸಹನೆ,
ಧೈರ್ಯಕ್ಕೆ ಬೆಲೆ ಕಟ್ಟಲಾಗುವುದಿಲ್ಲ.

ಅಪ್ಪ ಎಂದರೆ ಅದೊಂದು ಹೆಮ್ಮರ,
ತನಗೆ ಬಿಸಿಲು ತಾಗಿದರೂ ಮಕ್ಕಳಿಗೆ ನೆರಳು ನೀಡುವ,
ಮಕ್ಕಳ ಭವಿಷ್ಯ ರೂಪಿಸುವ,
ಅಪ್ಪನ ಜವಾಬ್ದಾರಿಗೆ ಬೆಲೆ ಕಟ್ಟಲಾಗುವುದಿಲ್ಲ.

ತನ್ನ ಆಸೆ-ಆಕಾಂಕ್ಷೆಗಳನ್ನು ಬದಿಗಿಟ್ಟು,
ಇದ್ದುದರಲ್ಲಿಯೇ ಸಂತೃಪ್ತಿ ಹೊಂದಿ,
ಹಗಲಿರುಳು ಶ್ರಮಿಸುವ ನಿಸ್ವಾರ್ಥಿಗೆ,
ಅಪ್ಪನ ದುಡಿಮೆಗೆ ಬೆಲೆ ಕಟ್ಟಲಾಗುವುದಿಲ್ಲ.

ಕಷ್ಟ-ಕಾರ್ಪಣ್ಯಗಳನ್ನು ಮರೆಮಾಚಿ,
ನೋವು, ಸಂಕಟ ಹೊರಗೆ ತೋರ್ಪಡಿಸದೇ,
ಎಲ್ಲವನ್ನೂ ಎದುರಿಸಿ ನಿಲ್ಲಬಲ್ಲ ಪರ್ವತದಂತಹ
ಅಪ್ಪನ ವ್ಯಕ್ತಿತ್ವಕ್ಕೆ ಬೆಲೆ ಕಟ್ಟಲಾಗುವುದಿಲ್ಲ.

ಮಗಳಲ್ಲಿ ತಾಯಿಯ ರೂಪ ಕಂಡು,
ಅವಳ ನಗೆಯಲ್ಲಿ ಸಂತಸ ಕಾಣುವ,
ದೇಶಭಕ್ತಿಯ ಪಾಠ ಕಲಿಸುವ
ಅಪ್ಪನ ವಾತ್ಸಲ್ಯಕ್ಕೆ ಬೆಲೆ ಕಟ್ಟಲಾಗುವುದಿಲ್ಲ.

ಅಪ್ಪ ಎನ್ನುವುದೊಂದು ಅಪರಿಮಿತ ಶಕ್ತಿ,
ಕರುಣೆ ಮತ್ತು ಪ್ರೀತಿಯ ಸಂಕೇತ,
ಮಕ್ಕಳ ಪಾಲಿನ ಮೊದಲ ನಾಯಕ,
ದೇಶಭಕ್ತಿಯ ಅಂಕುರ ಬಿತ್ತಿದ ದಿವ್ಯ ಬೆಳಕು,
ಆ ಅಪ್ಪನ ಪ್ರೀತಿಗೆ ಬೆಲೆ ಕಟ್ಟಲಾಗುವುದಿಲ್ಲ.

**–ಶ್ರೀಮತಿ ಅಂಜನಾ ರಾಘವೇಂದ್ರ ಕುಬೇರ,**
ಗದಗ

### ತ್ಯಾಗ, ಜವಾಬ್ದಾರಿ, ಮಮತೆ ಮತ್ತು ಭದ್ರತೆಯ ಜೀವಂತ ಪ್ರತಿರೂಪ – ಅಪ್ಪ

# ಅಪ್ಪ: ಮಕ್ಕಳ ಬಾಳಿಗೆ ಬೆಳಕು

"ಅಪ್ಪ ನಗುವುದಿಲ್ಲ... ನಕ್ಕರೂ ನೋವು ತೋರಿಸುವುದಿಲ್ಲ. ಅಪ್ಪ ಕಣ್ಣೀರು ಹಾಕುವುದಿಲ್ಲ... ಆದರೆ ಮಕ್ಕಳ ಕಣ್ಣೀರಿಗೆ ಮೊದಲು ಸ್ಪಂದಿಸುವ ಬೆರಳು ಅಪ್ಪನದೇ."

ಅಪ್ಪ ಎಂದರೆ ಕೇವಲ ಒಂದು ಪದವಲ್ಲ, ಅದು ಬದುಕಿನ ಭರವಸೆ. ಅಪ್ಪ ಎಂದರೆ ಮಕ್ಕಳ ಭವಿಷ್ಯಕ್ಕಾಗಿ ತನ್ನ ಇಂದನ್ನು ತ್ಯಾಗ ಮಾಡುವ ಜೀವ. ತಾಯಿ ಪ್ರೀತಿಯನ್ನು ವ್ಯಕ್ತಪಡಿಸಿದರೆ, ತಂದೆ ತನ್ನ ಪ್ರೀತಿಯನ್ನು ಕರ್ತವ್ಯದ ಮೂಲಕ ತೋರಿಸುತ್ತಾನೆ. ಅದಕ್ಕಾಗಿಯೇ "ಪಿತೃದೇವೋ ಭವ" ಎಂಬ ಮಾತು ಭಾರತೀಯ ಸಂಸ್ಕೃತಿಯಲ್ಲಿ ವಿಶೇಷ ಸ್ಥಾನ ಪಡೆದಿದೆ.

ಮಗುವಿನ ಮೊದಲ ಹೀರೋ ಅಪ್ಪ. ಜಗತ್ತಿನ ಎಲ್ಲ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಲ್ಲ ವ್ಯಕ್ತಿಯಂತೆ ಮಕ್ಕಳ ಕಣ್ಣಿಗೆ ಕಾಣುವವನು ತಂದೆ. ಬಾಲ್ಯದಲ್ಲಿ ಕೈ ಹಿಡಿದು ನಡೆಯಲು ಕಲಿಸುವವನು, ಯೌವನದಲ್ಲಿ ಬದುಕಿನ ದಾರಿ ತೋರಿಸುವವನು, ಸಂಕಷ್ಟದ ಸಮಯದಲ್ಲಿ ಧೈರ್ಯ ತುಂಬುವವನು ಅಪ್ಪ. ಕುಟುಂಬದ ಪ್ರತಿಯೊಬ್ಬ ಸದಸ್ಯರ ಯೋಗಕ್ಷೇಮ, ಶಿಕ್ಷಣ, ಆರೋಗ್ಯ ಮತ್ತು ಭವಿಷ್ಯದ ಜವಾಬ್ದಾರಿಯನ್ನು ತನ್ನ ಹೆಗಲ ಮೇಲೆ ಹೊತ್ತು ಸಾಗುವ ನಿಜವಾದ ನಾಯಕ.

ಹೊರಗೆ ಗಂಭೀರವಾಗಿ ಕಾಣುವ ಅಪ್ಪನ ಮನಸ್ಸಿನೊಳಗೆ ಅಪಾರವಾದ ಪ್ರೀತಿ ಅಡಗಿರುತ್ತದೆ. ಮಕ್ಕಳಿಗೆ ಹೊಸ ಬಟ್ಟೆ, ಉತ್ತಮ ಶಿಕ್ಷಣ, ಸುಂದರ ಭವಿಷ್ಯ



ದೊರೆಯಲಿ ಎಂಬ ಕನಸಿಗಾಗಿ ತನ್ನ ಆಸೆಗಳನ್ನು ಬದಿಗೊತ್ತುವ ತ್ಯಾಗಮೂರ್ತಿ. ತನ್ನ ಹರಿದ ಚಪ್ಪಲಿ, ಹಳೆಯ ಬಟ್ಟೆಗಳನ್ನು ಗಮನಿಸದೇ ಮಕ್ಕಳ ಅಗತ್ಯಗಳನ್ನು ಮೊದಲ ಆದ್ಯತೆಯಾಗಿ ಕಾಣುವ ವ್ಯಕ್ತಿ.

ಮಕ್ಕಳು ಸೋತಾಗ ಧೈರ್ಯ ತುಂಬುವ, ಗೆದ್ದಾಗ ಹೆಮ್ಮೆಯಿಂದ ಎದೆ ಉಬ್ಬಿಸಿಕೊಳ್ಳುವ ಜೀವ ಅಪ್ಪ. "ನನ್ನ ಮಗ", "ನನ್ನ ಮಗಳು" ಎಂದು ಹೇಳುವಾಗ ಅವರ ಕಣ್ಣಲ್ಲಿ ಕಾಣುವ ಹೊಳಪು ಯಾವುದೇ ಪ್ರಶಸ್ತಿಗಿಂತ ದೊಡ್ಡದು. ಮಕ್ಕಳ ಸಾಧನೆಯೇ ತಂದೆಯ ಜೀವನದ ನಿಜವಾದ ಸಂಪತ್ತು.

ಅಮ್ಮ ಸುಲಭವಾಗಿ ಅರ್ಥವಾಗುವ ಭಾವಗೀತೆಯಾದರೆ, ಅಪ್ಪ ನಿಧಾನವಾಗಿ ಅರ್ಥವಾಗುವ ಮಹಾಕಾವ್ಯ. ಅವರ ಗದರಿಕೆಯ ಹಿಂದೆ ಕಾಳಜಿ ಇರುತ್ತದೆ. ಅವರ ಮೌನದ ಹಿಂದೆ ಸಾವಿರ ಚಿಂತೆಗಳಿರುತ್ತವೆ. ಮಕ್ಕಳ ಭವಿಷ್ಯಕ್ಕಾಗಿ ನಿದ್ದೆಯನ್ನೇ ತ್ಯಾಗ ಮಾಡಿ ಕನಸು ಕಾಣುವ ಹೃದಯ ಅಪ್ಪನದು.

ಇಂದಿನ ಆಧುನಿಕ ಯುಗದಲ್ಲಿ ತಂದೆಯ ಪಾತ್ರ ಮತ್ತಷ್ಟು ವಿಸ್ತರಿಸಿದೆ. ಅವರು ಕೇವಲ ಮನೆಯ ಮುಖ್ಯಸ್ಥರಲ್ಲ; ಸ್ನೇಹಿತ, ಮಾರ್ಗದರ್ಶಕ, ಸಲಹೆಗಾರ ಮತ್ತು ಪ್ರೇರಣೆಯ ಮೂಲವಾಗಿದ್ದಾರೆ. ಮಕ್ಕಳೊಂದಿಗೆ ಮಕ್ಕಳಾಗಿ ಬೆರೆತು ಅವರ ಕನಸುಗಳಿಗೆ ರೆಕ್ಕೆ ಕಟ್ಟುವ ಕೆಲಸವನ್ನು ಮಾಡುತ್ತಿದ್ದಾರೆ.

ವಿಶ್ವ ಅಪ್ಪಂದಿರ ದಿನದ ಆಚರಣೆ 1910ರಲ್ಲಿ ಅಮೆರಿಕಾದಲ್ಲಿ ಆರಂಭವಾಯಿತು. ತನ್ನ ತಂದೆಯ ತ್ಯಾಗವನ್ನು ಗೌರವಿಸಲು ಸೋನೋರಾ ಸ್ಮಾರ್ಟ್ ಡಾಡ್ ಈ ದಿನದ ಪರಿಕಲ್ಪನೆಯನ್ನು ಮುಂದಿಟ್ಟರು. ಇಂದು ವಿಶ್ವದಾದ್ಯಂತ ತಂದೆಯ ಪ್ರೀತಿ ಮತ್ತು ಕೊಡುಗೆಯನ್ನು ಸ್ಮರಿಸುವ ದಿನವಾಗಿ ಆಚರಿಸಲಾಗುತ್ತಿದೆ.

ಅಪ್ಪ ಎಂದರೆ ಅಂತರಂಗದಲ್ಲಿ ಸದಾ ಬೆಳಗುವ ಹೊಂಬೆಳಕು. ಆ ಬೆಳಕು ನಮ್ಮ ವ್ಯಕ್ತಿತ್ವವನ್ನು ರೂಪಿಸುತ್ತದೆ, ಭವಿಷ್ಯದ ದಾರಿಯನ್ನು ತೋರಿಸುತ್ತದೆ. ತಾಯಿಯ ಮಮತೆಯಂತೆ ತಂದೆಯ ತ್ಯಾಗವೂ ಅಮೂಲ್ಯ. ಆದ್ದರಿಂದ ವರ್ಷದಲ್ಲಿ ಒಂದು ದಿನ ಮಾತ್ರವಲ್ಲ, ಪ್ರತಿದಿನವೂ ಅಪ್ಪನ ದಿನವಾಗಬೇಕು.

"ಇಡೀ ಜಗತ್ತಿಗೆ ಅವರು ಕೇವಲ ಒಬ್ಬ ತಂದೆಯಾಗಿರಬಹುದು; ಆದರೆ ಒಂದು ಕುಟುಂಬಕ್ಕೆ ಅವರೇ ಇಡೀ ಪ್ರಪಂಚ."

**– ಡಾ. ತಯಬಅಲಿ ಅ. ಹೊಂಬಳ**
**ಮಕ್ಕಳ ಸಾಹಿತಿ, ಗದಗ**

#### ಅಪ್ಪನ ಬಗ್ಗೆ ಕೆಲವು ಅಮೂಲ್ಯ ನುಡಿಗಳು

ತಂದೆ ತನ್ನ ಸುಖವನ್ನು ತ್ಯಾಗ ಮಾಡಿ ಕುಟುಂಬದ ಸಂತೋಷಕ್ಕಾಗಿ ಬದುಕುತ್ತಾನೆ.
ಮಕ್ಕಳಿಗೆ ಬದುಕಿನ ಪಾಠ ಕಲಿಸುವ ಮೊದಲ ಗುರು ತಂದೆ.
ಮಕ್ಕಳ ಯಶಸ್ಸಿನಲ್ಲಿ ಹೆಚ್ಚು ಸಂತೋಷಪಡುವ ಹೃದಯ ತಂದೆಯದು.
ಪ್ರೀತಿಯನ್ನು ಮಾತಿನಲ್ಲಿ ಹೇಳದಿದ್ದರೂ, ಪ್ರತಿಕ್ಷಣ ಕೃತಿಯಲ್ಲಿ ತೋರಿಸುವವನು ಅಪ್ಪ.
ಕಷ್ಟದ ಸಮಯದಲ್ಲಿ ಬೆಟ್ಟದಂತೆ ನಿಂತು ಧೈರ್ಯ ತುಂಬುವ ಶಕ್ತಿ ತಂದೆ.

# ಸಮಷ್ಟಿ ಪ್ರಜ್ಞೆಗೆ ಬೇಕಿದೆ ಯೋಗಸೂತ್ರ..!

### 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ನಿಮಿತ್ತ ಲೇಖನ



ಇಂದು ವಿಶ್ವದಾದ್ಯಂತ 12ನೇ ಅಂತಾರಾಷ್ಟ್ರೀಯ ಯೋಗ ದಿನವನ್ನು "ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ" ಎಂಬ ಧ್ಯೇಯವಾಕ್ಯದೊಂದಿಗೆ ಆಚರಿಸಲಾಗುತ್ತಿದೆ. ಜಾಗತಿಕ ಮಟ್ಟದಲ್ಲಿ ಆರೋಗ್ಯ ಮತ್ತು ಸ್ವಾಸ್ಥ್ಯದ ವಿಚಾರದಲ್ಲಿ ಇಡೀ ವಿಶ್ವವೇ ಭಾರತದೆಡೆಗೆ ಮುಖ ಮಾಡುವಂತೆ ಮಾಡಿದ ಶ್ರೇಯಸ್ಸು ನಮ್ಮ ಯೋಗ ಶಾಸ್ತ್ರಕ್ಕೆ ಸಲ್ಲುತ್ತದೆ.

ಒಂದಾನೊಂದು ಕಾಲದಲ್ಲಿ ಯೋಗವೆಂದರೆ ಯೋಗಿಗಳು, ತಪಸ್ವಿಗಳು ಮತ್ತು ಆಧ್ಯಾತ್ಮಿಕ ಸಾಧಕರಿಗೆ ಮಾತ್ರ ಸೀಮಿತ ಎನ್ನುವ ಭಾವನೆ ಇತ್ತು. ಆದರೆ ಇಂದು ಆಧುನಿಕತೆಯ ಭರಾಟೆಯಲ್ಲಿ ತಲ್ಲಣಗೊಳ್ಳುತ್ತಿರುವ ಮನುಷ್ಯನ ದೈಹಿಕ ಹಾಗೂ ಭಾವನಾತ್ಮಕ ಬದುಕಿನಲ್ಲಿ ಸಮತೋಲನ ಸಾಧಿಸಲು ಯೋಗ ಅನಿವಾರ್ಯವಾಗಿದೆ. ವಿಜ್ಞಾನವು ಜೀವನದ ಸೌಲಭ್ಯಗಳನ್ನು ಒದಗಿಸಬಹುದು; ಆದರೆ ಬದುಕಿನ ಪರಮೋದ್ದೇಶದ ಅರಿವು ಮತ್ತು ಆಂತರಿಕ ನೆಮ್ಮದಿಯನ್ನು ನೀಡುವುದು ಯೋಗದಂತಹ ಜೀವನಶೈಲಿಯೇ.

ಯೋಗವು ಕೇವಲ ದೈಹಿಕ ವ್ಯಾಯಾಮವಲ್ಲ. ಅದು ಮನಸ್ಸು, ದೇಹ ಮತ್ತು ಪ್ರಕೃತಿಯ ನಡುವೆ ಸಾಮರಸ್ಯ ಸಾಧಿಸುವ ಸಮಗ್ರ ಜೀವನ ಕ್ರಮವಾಗಿದೆ. ಯಮ, ನಿಯಮ, ಆಸನ, ಪ್ರಾಣಾಯಾಮ, ಪ್ರತ್ಯಾಹಾರ, ಧಾರಣ, ಧ್ಯಾನ ಮತ್ತು ಸಮಾಧಿ ಎಂಬ ಅಷ್ಟಾಂಗ ಯೋಗದ ಮೂಲಕ ವ್ಯಕ್ತಿಯ ಶಾರೀರಿಕ, ಮಾನಸಿಕ, ಸಾಮಾಜಿಕ ಹಾಗೂ ಆಧ್ಯಾತ್ಮಿಕ ವಿಕಾಸ ಸಾಧ್ಯವಾಗುತ್ತದೆ.

ಸುಮಾರು 5,000 ವರ್ಷಗಳ ಇತಿಹಾಸ ಹೊಂದಿರುವ ಯೋಗವು ಭಾರತದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯ ಅಮೂಲ್ಯ ಕೊಡುಗೆ. ಸಿಂಧೂ ಕಣಿವೆ ನಾಗರಿಕತೆಯ ಅವಶೇಷಗಳಲ್ಲಿ ಕಂಡುಬಂದ ಧ್ಯಾನಸ್ಥ ಮೂರ್ತಿಗಳು ಯೋಗದ ಪ್ರಾಚೀನತೆಯನ್ನು ಸಾರುತ್ತವೆ. ಋಗ್ವೇದದಲ್ಲಿ ಮೊದಲ ಬಾರಿಗೆ 'ಯೋಗ' ಎಂಬ ಪದದ ಉಲ್ಲೇಖ ಕಂಡುಬಂದರೆ, ಉಪನಿಷತ್ತುಗಳಲ್ಲಿ ಅದರ ತತ್ವಗಳು ಮತ್ತಷ್ಟು ವಿಸ್ತಾರಗೊಂಡವು. ಕ್ರಿ.ಪೂ. 2ನೇ ಶತಮಾನದ ಮಹರ್ಷಿ ಪತಂಜಲಿಯವರು ರಚಿಸಿದ 'ಯೋಗಸೂತ್ರ' ಇಂದಿಗೂ ಯೋಗ ಅಧ್ಯಯನದ ಮೂಲ ಆಧಾರವಾಗಿದೆ.

2014ರಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಯೋಗದ ಮಹತ್ವವನ್ನು ವಿಶ್ವ ಸಮುದಾಯಕ್ಕೆ ಪರಿಚಯಿಸಿದರು. ಭಾರತದ ಈ ಪ್ರಸ್ತಾವನೆಗೆ 175 ರಾಷ್ಟ್ರಗಳು ಬೆಂಬಲ ಸೂಚಿಸಿದ ಪರಿಣಾಮ, ಡಿಸೆಂಬರ್ 11, 2014ರಂದು ವಿಶ್ವಸಂಸ್ಥೆಯು ಜೂನ್ 21 ಅನ್ನು ಅಧಿಕೃತವಾಗಿ ಅಂತರರಾಷ್ಟ್ರೀಯ ಯೋಗ ದಿನವೆಂದು ಘೋಷಿಸಿತು.

ಈ ವರ್ಷದ ಥೀಮ್ 'ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ' ವಿಶೇಷ ಮಹತ್ವ ಹೊಂದಿದೆ. ವೃದ್ಧಾಪ್ಯದಲ್ಲಿ ದೈಹಿಕ ಶಕ್ತಿಯ ಕುಸಿತ, ಆರೋಗ್ಯ ಸಮಸ್ಯೆಗಳು ಹಾಗೂ ಏಕಾಂಗಿತನದ ಭಾವನೆಗಳು ಸಾಮಾನ್ಯ. ಇಂತಹ ಸಂದರ್ಭದಲ್ಲಿ ಯೋಗಾಭ್ಯಾಸವು ಆತ್ಮಸ್ಥೈರ್ಯ, ಮನೋಬಲ ಹಾಗೂ ದೈಹಿಕ ಸಾಮರ್ಥ್ಯವನ್ನು ವೃದ್ಧಿಸಿ ಆರೋಗ್ಯಕರ ಬದುಕಿಗೆ ದಾರಿಯಾಗುತ್ತದೆ.

ವೃದ್ಧಾಪ್ಯ ಮಾತ್ರವಲ್ಲದೆ ಬಾಲ್ಯ ಮತ್ತು ಯೌವನದಲ್ಲಿಯೂ ಯೋಗ ಅತ್ಯಗತ್ಯವಾಗಿದೆ. ಒತ್ತಡ ನಿವಾರಣೆ, ರೋಗನಿರೋಧಕ ಶಕ್ತಿ ಹೆಚ್ಚಳ ಹಾಗೂ ಆರೋಗ್ಯಕರ ಜೀವನಶೈಲಿ ರೂಪಿಸುವಲ್ಲಿ ಯೋಗದ ಪಾತ್ರ ಅನನ್ಯವಾಗಿದೆ. ಇಂದು ಯೋಗವು ಭಾರತಕ್ಕೆ ಮಾತ್ರ ಸೀಮಿತವಾಗದೇ ಜಾಗತಿಕ ಆರೋಗ್ಯ ಚಳವಳಿಯಾಗಿ ರೂಪುಗೊಂಡಿರುವುದು ಪ್ರತಿಯೊಬ್ಬ ಭಾರತೀಯನಿಗೂ ಹೆಮ್ಮೆಯ ಸಂಗತಿಯಾಗಿದೆ.

ಯೋಗವು ಕೇವಲ ಒಂದು ದಿನದ ಆಚರಣೆಯಾಗದೇ, ಪ್ರತಿದಿನದ ಜೀವನ ಪದ್ಧತಿಯಾಗಬೇಕು. ಆಗ ಮಾತ್ರ ವ್ಯಕ್ತಿಯ ನೆಮ್ಮದಿ, ಸಮಾಜದ ಸಾಮರಸ್ಯ ಮತ್ತು ವಿಶ್ವದ ಆರೋಗ್ಯಕರ ಭವಿಷ್ಯ ಸಾಧ್ಯವಾಗುತ್ತದೆ.

**–ಹೊನ್ನಪ್ಪ ಕರೆಕನ್ನಮ್ಮನವರ,**
ಶಿಕ್ಷಕರು, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹನುಮರಹಳ್ಳಿ

### ಜೂನ್ 21 – ವಿಶ್ವ ಅಪ್ಪಂದಿರ ದಿನಾಚರಣೆಯ ನಿಮಿತ್ತ ಈ ಲೇಖನ

# ಅಪ್ಪ: ಅಸಾಮಾನ್ಯ ವ್ಯಕ್ತಿತ್ವದ ಸಾಕಾರ ಮೂರ್ತಿ

"ಮಾತೃದೇವೋ ಭವ, ಪಿತೃದೇವೋ ಭವ" ಎಂಬ ವೇದವಾಕ್ಯದಂತೆ ತಂದೆ-ತಾಯಂದಿರು ದೇವರಿಗೆ ಸಮಾನರು. ಜಗತ್ತಿನಲ್ಲಿರುವ ಮುಕ್ಕೋಟಿ ದೇವರಿಗೆ ಸರಿಸಮಾನವಾಗಿ ನಿಲ್ಲುವ ನೈಜ ವ್ಯಕ್ತಿತ್ವದ ವ್ಯಕ್ತಿ ಎಂದರೆ ಅದು ಅಪ್ಪ. ದೇವರು ನೀಡಿದ ಶ್ರೇಷ್ಠ ಸಂಪತ್ತು, ಪ್ರೀತಿಯ ನೆರಳು, ಉಸಿರು ನೀಡಿದ ದೇವರು, ಸುಂದರ ಬದುಕಿನ ಮಾರ್ಗದರ್ಶಿ ಅಪ್ಪ. ಅವರನ್ನು ಎಷ್ಟೇ ವರ್ಣಿಸಿದರೂ ಸಾಲದು.

ತಾಯಿ ಮಡಿಲಿನ ಲಾಲನೆಗೆ ತಂದೆ-ಯು ಆಸರೆಯ ನೆರಳಾಗಿ, ಪೋಷಣೆಯ ವೃಕ್ಷವಾಗಿ, ಮಕ್ಕಳ ಸಾಧನೆಗೆ ಗುರುವಾಗಿ ನಿಲ್ಲುವ ತ್ಯಾಗಜೀವಿ. ಮಗುವಿಗೆ ಅಪ್ಪನೇ ಪ್ರಪಂಚ, ಆತನೇ ಸರ್ವಸ್ವ. ಕುಟುಂಬದ ಅತ್ಯಂತ ಅವಿಭಾಜ್ಯ ಅಂಗವಾಗಿರುವ ಅಪ್ಪ ತನ್ನ ಮಕ್ಕಳಿಗಾಗಿ ಸರ್ವಸ್ವವನ್ನೂ ತ್ಯಾಗ ಮಾಡಲು ಸಿದ್ಧನಾಗಿರುತ್ತಾನೆ. ಅಂತಹ ಅಪ್ಪನಿಗೆ ಧನ್ಯವಾದ ಸಲ್ಲಿಸಲು ಇರುವ ದಿನವೇ ಅಪ್ಪಂದಿರ ದಿನ.

ತಂದೆ ಒಬ್ಬ ರಕ್ಷಕ ಮತ್ತು ಮಾರ್ಗದರ್ಶಕ. ಅವರ ಮೇಲಿನ ಪ್ರೀತಿ, ಸ್ನೇಹ, ಗೌರವ, ಕೃತಜ್ಞತೆ ಮತ್ತು ಮೆಚ್ಚುಗೆಯನ್ನು ವ್ಯಕ್ತಪಡಿಸುವ ಸಮಯವಿದು. ವಿಶ್ವದ ಅನೇಕ ರಾಷ್ಟ್ರಗಳಲ್ಲಿ ಜೂನ್ ತಿಂಗಳ ಮೂರನೇ ಭಾನುವಾರವನ್ನು ಅಪ್ಪಂದಿರ ದಿನವಾಗಿ ಆಚರಿಸಲಾಗುತ್ತದೆ. ಭಾರತದಲ್ಲಿಯೂ ಇದೇ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ಈ ವರ್ಷ ಜೂನ್ 21, 2026ರಂದು ಅಪ್ಪಂದಿರ ದಿನ ಆಚರಣೆ ನಡೆಯುತ್ತಿದೆ.

ತಂದೆಯ ದಿನಾಚರಣೆಯ ಇತಿಹಾಸವೂ ವಿಶೇಷವಾಗಿದೆ. 1908ರ ಜುಲೈ 5ರಂದು ಅಮೆರಿಕದ ಪಶ್ಚಿಮ ವರ್ಜೀನಿಯಾದಲ್ಲಿ ನಡೆದ ಭೀಕರ ಅಪಘಾತದಲ್ಲಿ ನೂರಾರು




ಪುರುಷರು ಸಾವಿಗೀಡಾದರು. ಬಳಿಕ ತಂದೆ-ಯರ ತ್ಯಾಗ ಮತ್ತು ಕೊಡುಗೆಯನ್ನು ಸ್ಮರಿಸುವ ಉದ್ದೇಶದಿಂದ ಈ ಆಚರಣೆಗೆ ಚಾಲನೆ ದೊರೆಯಿತು. ನಂತರ ಸೋನೋರಾ ಸ್ಮಾರ್ಟ್ ಡಾಡ್ ಎಂಬ ಮಹಿಳೆ ತನ್ನ ತಂದೆಯ ಗೌರವಾರ್ಥವಾಗಿ ತಂದೆಯ ದಿನವನ್ನು ಆಚರಿಸುವ ಪರಿಕಲ್ಪನೆಯನ್ನು ಮುಂದಿಟ್ಟರು. 1972ರಲ್ಲಿ ಅಮೆರಿಕದ ಅಧ್ಯಕ್ಷ ರಿಚರ್ಡ್ ನಿಕ್ಸನ್ ಅಧಿಕೃತ ಮಾನ್ಯತೆ ನೀಡಿದ ಬಳಿಕ ವಿಶ್ವದಾದ್ಯಂತ ಈ ದಿನವನ್ನು ಆಚರಿಸಲಾಗುತ್ತಿದೆ.

ಕುಟುಂಬದಲ್ಲಿ ತಂದೆಯ ಕೊಡುಗೆಯನ್ನು ಅರಿತುಕೊಳ್ಳುವ ಹಾಗೂ ಗೌರವಿಸುವ ಉದ್ದೇಶದಿಂದ ಈ ದಿನವನ್ನು ಆಚರಿಸಲಾಗುತ್ತದೆ. ಪಿತೃತ್ವ, ಪಿತೃಬಂಧುಗಳು ಮತ್ತು ಪುರುಷ ಪೋಷಕರು ತಮ್ಮ ಕುಟುಂಬ ಹಾಗೂ ಮಕ್ಕಳಿಗಾಗಿ ಮಾಡಿದ ಪರಿಶ್ರಮವನ್ನು ಸ್ಮರಿಸುವ ದಿನ ಇದಾಗಿದೆ.

ಅಪ್ಪ ಎಂದರೆ ಭೂಮಿಯಷ್ಟು ಸಹನೆ, ಬಾನಿನಷ್ಟು ಕರುಣೆಯುಳ್ಳ ದೈವತ್ವದ ಸಾಕಾರ

#### ಅಪ್ಪನ ಬಗ್ಗೆ...

ಕರಗದಷ್ಟು ಪ್ರೀತಿ ಎನ್ನುವ ಆಸ್ತಿ ಕೊಟ್ಟ ಸಾಹುಕಾರ;
ಮಡದಿ-ಮಕ್ಕಳ ಮನ ಗೆದ್ದ ಮನೆ ವಾರಸುದಾರ;
ಎಲ್ಲರ ಕಷ್ಟ-ಸುಖದಲ್ಲಿ ಪಾಲುದಾರ;
ಮಕ್ಕಳ ಖುಷಿಯಲಿ ತನ್ನ ನೋವು ಮರೆಯುವ ಉದಾರ ಹೃದಯ, ತಪ್ಪು ತಿದ್ದಿ ತಿಳಿಸಿ ಹೇಳುವ ಜೀವನದ ಸಲಹೆಗಾರ.

ಮೂರ್ತಿ. ಅಪ್ಪ ಎಂದರೆ ನಿಸ್ವಾರ್ಥ ಭಾವದ ಕರುಣಾ ಸ್ವರೂಪಿ. ಭದ್ರತೆಯ ಭಾವನೆಗೂ ಮೀರಿದ ಅಮೂರ್ತ ವ್ಯಕ್ತಿತ್ವ. ನನ್ನ ಸ್ಫೂರ್ತಿ, ನನ್ನ ಶಕ್ತಿ ಮತ್ತು ನನ್ನ ಧೈರ್ಯ ಎಲ್ಲವೂ ನನ್ನ ತಂದೆ. ಅಪ್ಪ ಎಂದರೆ ಕನಸುಗಳ ರೂವಾರಿ, ಸ್ಫೂರ್ತಿಯ ಚಿಲುಮೆ, ಬದುಕು ಕಟ್ಟಿಕೊಳ್ಳಲು ಸಲಹೆ ಮತ್ತು ಮಾರ್ಗದರ್ಶನ ನೀಡುವ ಮಹಾನ್ ವ್ಯಕ್ತಿ. ಅವರು ಕೇವಲ ತಂದೆ ಮಾತ್ರವಲ್ಲ, ಮಕ್ಕಳ ಉತ್ತಮ ಸ್ನೇಹಿತರೂ ಹೌದು.

ಜೀವ ಕೊಟ್ಟು ಜೀವನ ರೂಪಿಸಿದ ಅಪ್ಪನಿಗೆ ಪ್ರತಿದಿನವೂ ಗೌರವ ಸಲ್ಲಿಸಬೇಕು. ತಾಯಿ ಮಮತೆಯ ಮಡಿಲು ನೀಡಿದರೆ, ತಂದೆಯು ರಕ್ಷಣೆಯ ಭುಜ ನೀಡುತ್ತಾನೆ. ಅಮ್ಮ ಬದುಕು ನೀಡಿದರೆ, ಆ ಬದುಕಿಗೆ ಭರವಸೆ ತುಂಬುವವನೇ ಅಪ್ಪ. ಅಮ್ಮನ ಪ್ರೀತಿ ಮಮತೆಯಲ್ಲಿ ಕಾಣಿಸಿದರೆ, ಅಪ್ಪನ ಪ್ರೀತಿ ಜವಾಬ್ದಾರಿಯ ನಿರ್ವಹಣೆಯಲ್ಲಿ ಕಾಣಿಸುತ್ತದೆ.

ಕೆಲ ಅಪ್ಪಂದಿರು ಮಕ್ಕಳೊಂದಿಗೆ ಸ್ನೇಹಿತರಂತೆ ಇರುತ್ತಾರೆ. ಇನ್ನು ಕೆಲವರು ಶಿಸ್ತಿನ ಪ್ರತಿರೂಪವಾಗಿರುತ್ತಾರೆ. ಆದರೆ ಅವರ ಪ್ರೀತಿಯ ಆಳವನ್ನು ಮಕ್ಕಳು ತಾವೇ ತಂದೆ-ತಾಯಿಯಾದಾಗ ಹೆಚ್ಚು ಅರ್ಥಮಾಡಿಕೊಳ್ಳುತ್ತಾರೆ. ಮಕ್ಕಳ ಜವಾಬ್ದಾರಿಗಳನ್ನು ನಿಭಾಯಿಸುತ್ತಾ ತಮ್ಮ ಬದುಕನ್ನೇ ಸವೆಸುವ ತಂದೆ, ತನ್ನ ಮಕ್ಕಳು ಉತ್ತಮ ವ್ಯಕ್ತಿಗಳಾಗಿ ಬೆಳೆದಾಗ ಮಾತ್ರ ನಿಜವಾದ ಸಂತೃಪ್ತಿ ಕಾಣುತ್ತಾನೆ.

ಪ್ರೀತಿಯ ಅಪ್ಪ, ಇಡೀ ಪ್ರಪಂಚಕ್ಕೆ ನೀವು ತಂದೆಯಾಗಿರಬಹುದು. ಆದರೆ ನಮ್ಮ ಕುಟುಂಬಕ್ಕೆ ನೀವೇ ಇಡೀ ಪ್ರಪಂಚ. ನಿಮ್ಮ ಪರಿಶ್ರಮ, ತ್ಯಾಗ ಮತ್ತು ನೋವಿನ ಫಲವೇ ಇಂದು ನಾವು ಸಂತೋಷ ಹಾಗೂ ನೆಮ್ಮದಿಯ ಜೀವನ ನಡೆಸಲು ಕಾರಣವಾಗಿದೆ. "ಧನ್ಯವಾದ" ಎಂಬ ಪದವೂ ನಿಮ್ಮ ಋಣ ತೀರಿಸಲು ಸಾಕಾಗದು.


ಒಟ್ಟಾರೆಯಾಗಿ ತಂದೆಯ ಪ್ರೀತಿ ಶಾಶ್ವತ. ಆ ಪ್ರೀತಿಗೆ ಅಂತ್ಯವಿಲ್ಲ. ನಮ್ಮಿಗಾಗಿ ಅವರು ತೋರುವ ಪ್ರೀತಿ, ಕಾಳಜಿ ಮತ್ತು ಶ್ರಮಕ್ಕೆ ಕೃತಜ್ಞತೆ ಸಲ್ಲಿಸುವ ದಿನವೇ ಅಪ್ಪಂದಿರ ದಿನ. ಕುಟುಂಬದ ಆಧಾರಸ್ತಂಭವಾಗಿರುವ ಎಲ್ಲ ಅಪ್ಪಂದಿರಿಗೆ ಹೃತ್ಪೂರ್ವಕ ಶುಭಾಶಯಗಳು.

**– ಬಸವರಾಜ ಎಂ. ಯರಗುಪ್ಪಿ,**
ಶಿಕ್ಷಕರು ಹಾಗೂ ಹವ್ಯಾಸಿ ಬರಹಗಾರರು,
ಸಾ.ಪೊ. ರಾಮಗೇರಿ, ತಾ. ಲಕ್ಷ್ಮೇಶ್ವರ, ಜಿ. ಗದಗ



# ಸಮಚಿತ್ತದ ಕಡೆಗೊಂದು ಪಯಣ: ಯೋಗವೇ ಆರೋಗ್ಯದ ಮಂತ್ರ

### ಅಂತರರಾಷ್ಟ್ರೀಯ ಯೋಗ ದಿನಾಚರಣೆ ವಿಶೇಷ ಲೇಖನ



ಜೂನ್ 21 ಬಂದರೆ ಸಾಕು, ಇಡೀ ವಿಶ್ವವೇ ಭಾರತದತ್ತ ಹೆಮ್ಮೆಯಿಂದ ದೃಷ್ಟಿ ಹರಿಸುತ್ತದೆ. ಕಾರಣ, ವಿಶ್ವಕ್ಕೆ ಭಾರತ ನೀಡಿರುವ ಅಮೂಲ್ಯ ಕೊಡುಗೆಯಾದ ಯೋಗ. ಇಂದು ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕೇವಲ ಒಂದು ದಿನದ ಆಚರಣೆಯಾಗಿ ಉಳಿದಿಲ್ಲ, ಅದು ಜಾಗತಿಕ ಆರೋಗ್ಯ ಚಳವಳಿಯಾಗಿ ರೂಪುಗೊಂಡಿದೆ. ಭಾರತದ ಋಷಿಮುನಿಗಳು ನೀಡಿದ ಈ ಅಮೂಲ್ಯ ಪರಂಪರೆ ಇಂದು ಕೋಟ್ಯಂತರ ಜನರ ಜೀವನದ ಭಾಗವಾಗಿದೆ.

ಸಾಮಾನ್ಯವಾಗಿ ಯೋಗವೆಂದರೆ ಕೇವಲ ದೈಹಿಕ ವ್ಯಾಯಾಮ ಅಥವಾ ದೇಹವನ್ನು ಬಗ್ಗಿಸುವ ಆಸನಗಳು ಎಂಬ ತಪ್ಪು ಕಲ್ಪನೆ ಇದೆ. ಆದರೆ ಯೋಗವು ಅದಕ್ಕಿಂತಲೂ ಮಿಗಿಲಾದ ಜೀವನ ವಿಧಾನ. 'ಯೋಗ' ಎಂಬ ಪದವು ಸಂಸ್ಕೃತದ 'ಯುಜ್' ಎಂಬ ಧಾತುವಿನಿಂದ ಬಂದಿದ್ದು, ಅದರ ಅರ್ಥ ಜೋಡಿಸುವುದು, ಬೆಸೆಯುವುದು ಅಥವಾ ಒಗ್ಗೂಡಿಸುವುದು ಎಂದಾಗಿದೆ. ದೇಹ, ಮನಸ್ಸು ಮತ್ತು ಆತ್ಮವನ್ನು ಒಂದಾಗಿಸುವ ಸಮಗ್ರ ಜೀವನ ಶೈಲಿಯೇ ಯೋಗ.

ಯೋಗಶಾಸ್ತ್ರದ ಪಿತಾಮಹ ಮಹರ್ಷಿ ಪತಂಜಲಿ ಅವರು "ಯೋಗಃ ಚಿತ್ತ ವೃತ್ತಿ ನಿರೋಧಃ" ಎಂದು ಹೇಳಿದ್ದಾರೆ. ಅಂದರೆ ಮನಸ್ಸಿನ ಚಂಚಲತೆಯನ್ನು ನಿಯಂತ್ರಿಸುವುದೇ ಯೋಗ. ಈ ಒಂದು ವಾಕ್ಯವೇ ಯೋಗದ ಮಹತ್ವವನ್ನು ಸಾರುತ್ತದೆ.

ಯೋಗಾಭ್ಯಾಸದಿಂದ ದೇಹದ ನಮ್ಯತೆ ಹೆಚ್ಚುತ್ತದೆ. ಸ್ನಾಯುಗಳು ಬಲಗೊಳ್ಳುತ್ತವೆ. ಜೀರ್ಣಕ್ರಿಯೆ ಸುಧಾರಿಸುತ್ತದೆ. ರಕ್ತಸಂಚಲನ ಉತ್ತಮಗೊಳ್ಳುತ್ತದೆ. ದೇಹ ಚೈತನ್ಯದಿಂದ ಕೂಡಿರುತ್ತದೆ.

ಪ್ರಾಣಾಯಾಮ ಮತ್ತು ಧ್ಯಾನ ಮನಸ್ಸಿನ ಒತ್ತಡವನ್ನು ಕಡಿಮೆ ಮಾಡುತ್ತವೆ. ಆತಂಕ, ಖಿನ್ನತೆ ಮತ್ತು ಉದ್ವಿಗ್ನತೆಯಿಂದ ದೂರವಿರಲು ನೆರವಾಗುತ್ತವೆ. ವಿದ್ಯಾರ್ಥಿಗಳಲ್ಲಿ ಏಕಾಗ್ರತೆ, ನೆನಪಿನ ಶಕ್ತಿ ಮತ್ತು ಆತ್ಮವಿಶ್ವಾಸವನ್ನು ವೃದ್ಧಿಸುತ್ತವೆ.

ನಿಯಮಿತ ಯೋಗಾಭ್ಯಾಸ ದೇಹದ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ. ಅನೇಕ ದೀರ್ಘಕಾಲಿಕ ಕಾಯಿಲೆಗಳನ್ನು ನಿಯಂತ್ರಿಸುವಲ್ಲಿ ಯೋಗ ಪರಿಣಾಮಕಾರಿ ಪಾತ್ರ ವಹಿಸುತ್ತದೆ.

ಆಧುನಿಕ ಯುಗದಲ್ಲಿ ಮನುಷ್ಯ ಹಣ ಸಂಪಾದನೆಯ ಓಟದಲ್ಲಿ ಆರೋಗ್ಯವನ್ನು ಕಡೆಗಣಿಸುತ್ತಿದ್ದಾನೆ. ಅನಿಯಮಿತ ಆಹಾರ ಪದ್ಧತಿ, ಜಂಕ್ ಫುಡ್, ದೈಹಿಕ ಚಟುವಟಿಕೆಯ ಕೊರತೆ, ಮೊಬೈಲ್ ಮತ್ತು ಕಂಪ್ಯೂಟರ್‌ಗಳ ಅತಿಯಾದ ಬಳಕೆ ಇವೆಲ್ಲವೂ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗಿವೆ.

ಮಧುಮೇಹ, ರಕ್ತದೊತ್ತಡ, ಹೃದಯ ಸಂಬಂಧಿ ಕಾಯಿಲೆಗಳು, ಸ್ಥೂಲಕಾಯ ಮತ್ತು ಮಾನಸಿಕ ಒತ್ತಡ ಇಂದಿನ ಯುವಜನತೆಯನ್ನೇ ಕಾಡುತ್ತಿರುವ ಸಮಸ್ಯೆಗಳಾಗಿವೆ. ಇಂತಹ ಸಂದರ್ಭದಲ್ಲಿ ಯೋಗವು ಯಾವುದೇ ಅಡ್ಡಪರಿಣಾಮಗಳಿಲ್ಲದ ನೈಸರ್ಗಿಕ ಔಷಧಿಯಂತೆ ಕೆಲಸ ಮಾಡುತ್ತದೆ.

ದಿನದ 24 ಗಂಟೆಗಳಲ್ಲಿ ಕೇವಲ 30 ರಿಂದ 45 ನಿಮಿಷಗಳನ್ನು ಯೋಗಕ್ಕೆ ಮೀಸಲಿಟ್ಟರೆ ಸಾಕು. ಆರೋಗ್ಯಕರ ಜೀವನಕ್ಕೆ ಅದು ಭದ್ರ ಬುನಾದಿಯಾಗುತ್ತದೆ.

ಯೋಗ ದಿನಾಚರಣೆಯ ಮುಖ್ಯ ಉದ್ದೇಶ ಯೋಗದ ಮಹತ್ವವನ್ನು ಜನಸಾಮಾನ್ಯರಿಗೆ ತಲುಪಿಸುವುದಾಗಿದೆ. ಭಗವದ್ಗೀತೆಯಲ್ಲಿ ಶ್ರೀಕೃಷ್ಣನು ಹೇಳಿರುವಂತೆ "ಸಮತ್ವಂ ಯೋಗ ಉಚ್ಯತೇ" ಅಂದರೆ ಸಮಚಿತ್ತದಿಂದ ಇರುವುದೇ ಯೋಗ. ಸುಖ-ದುಃಖ, ಸೋಲು-ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸುವ ಮನೋಭಾವವನ್ನು ಯೋಗ ಬೆಳೆಸುತ್ತದೆ. ಯೋಗವು ಕೇವಲ ಜೂನ್ 21ರಂದು ಆಚರಿಸುವ ಕಾರ್ಯಕ್ರಮವಾಗಬಾರದು. ಅದು ನಮ್ಮ ಜೀವನದ ಅವಿಭಾಜ್ಯ ಅಂಗವಾಗಬೇಕು. ಪ್ರತಿದಿನದ ಅಭ್ಯಾಸವಾಗಬೇಕು.

**– ಹನುಮಂತ ಬೆಂತೂರ**
ಅಪ್ರೆಂಟಿಸ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಗದಗ

# ಜು.16ರಿಂದ ರಾಷ್ಟ್ರಮಟ್ಟದ ಸಮ್ಮೇಳನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ವತಿಯಿಂದ "Exploring Nature's Pharmacy: Potentials of Medicinal and Aromatic Plants for Health, Livelihoods, Bio-Economy and Conservation" ವಿಷಯದ ಕುರಿತು ಜುಲೈ 16 ರಿಂದ 18, 2026ರವರೆಗೆ ಮೂರು ದಿನಗಳ ರಾಷ್ಟ್ರ ಮಟ್ಟದ ಸಮ್ಮೇಳನವನ್ನು ಅಕಾಡೆಮಿಯ ಕಚೇರಿಯಲ್ಲಿ ಆಯೋಜಿಸಲಾಗಿದೆ.

ಸಮ್ಮೇಳನದಲ್ಲಿ ದೇಶದ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ಹಾಗೂ ತಜ್ಞರು ತಾಂತ್ರಿಕ ಉಪನ್ಯಾಸಗಳನ್ನು ನೀಡಲಿದ್ದಾರೆ. ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಯುವ ವಿಜ್ಞಾನಿಗಳು ಹಾಗೂ ಯುವ ಉದ್ಯಮಿಗಳು ಈ ಸಮ್ಮೇಳನದಲ್ಲಿ ಭಾಗವಹಿಸಲು ಅವಕಾಶವಿದೆ.

ಇದೇ ವೇಳೆ ಯುವ ವಿಜ್ಞಾನಿಗಳು ಮತ್ತು ಸಂಶೋಧನಾ ವಿದ್ಯಾರ್ಥಿಗಳಿಗೆ ತಮ್ಮ ಸಂಶೋಧನಾ ಪ್ರಬಂಧಗಳನ್ನು ಮಂಡಿಸಲು ಅವಕಾಶ ಕಲ್ಪಿಸಲಾಗಿದ್ದು, ಆಯ್ಕೆಯಾದ ಅತ್ಯುತ್ತಮ ಸಂಶೋಧನಾ ಪ್ರಬಂಧಗಳಿಗೆ ನಗದು ಬಹುಮಾನ ನೀಡಲಾಗುವುದು.

ಆಸಕ್ತರು ಜುಲೈ 10ರೊಳಗಾಗಿ ನೋಂದಣಿ ಮಾಡಿಕೊಳ್ಳ ಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9620767819 ಹಾಗೂ 9743084194 ಸಂಪರ್ಕಿಸಬಹುದು. ಅಲ್ಲದೇ ಅಕಾಡೆಮಿಯ ವೆಬ್‌ಸೈಟ್ ವೀಕ್ಷಿಸಿ ಮಾಹಿತಿಯನ್ನು ಪಡೆಯಬಹುದಾಗಿದೆ.

**'ಅದಾನಿ-ಟಾಟಾಗೆ ಲಾಭ, ರೈತರಿಗೆ ಸಂಕಷ್ಟ' ಆರೋಪ- ಡಂಬಳದಲ್ಲಿ ರೈತ ಸಂಘ-ಹಸಿರು ಸೇನೆಯಿಂದ ಪ್ರತಿಭಟನೆ**

# ವಿದ್ಯುತ್ ಖಾಸಗೀಕರಣಕ್ಕೆ ರೈತರ ಕಿಡಿ

■ವಿಜಯಸಾಕ್ಷಿ ಸುದ್ದಿ, ಡಂಬಳ

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸುವ ಮೂಲಕ ರೈತರು, ಬಡವರು ಹಾಗೂ ಸಾಮಾನ್ಯ ಗ್ರಾಹಕರ ಹಿತಾಸಕ್ತಿಗೆ ಧಕ್ಕೆ ತರುತ್ತಿವೆ ಎಂದು ಆರೋಪಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಕರ್ತರು ಡಂಬಳ ಉಪತಹಸೀಲ್ದಾರ್ ನಾಡಕಚೇರಿ ಆವರಣದಲ್ಲಿ ಶನಿವಾರ ಪ್ರತಿಭಟನೆ ನಡೆಸಿ ಸರ್ಕಾರಕ್ಕೆ ಎಚ್ಚರಿಕೆ ಸಂದೇಶ ರವಾನಿಸಿದರು.

ಖಾಸಗೀಕರಣ ವಿರೋಧಿಸಿ ಘೋಷಣೆಗಳನ್ನು ಕೂಗಿದ ಪ್ರತಿಭಟನಾಕಾರರು, ಉಪತಹಸೀಲ್ದಾರ್ ಎಸ್.ಎಸ್. ಬಿಚ್ಚಾಲಿ ಅವರಿಗೆ ಮನವಿ ಸಲ್ಲಿಸಿ ವಿದ್ಯುತ್ ವಿತರಣಾ ವ್ಯವಸ್ಥೆಯನ್ನು ಯಾವುದೇ ಕಾರಣಕ್ಕೂ ಖಾಸಗಿ ಕಂಪನಿಗಳಿಗೆ ವಹಿಸಬಾರದು ಎಂದು ಆಗ್ರಹಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಅಧ್ಯಕ್ಷ ಶಂಕರಗೌಡ ಜಯನಗೌಡ್ರ, ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸುವ ಹುನ್ನಾರ ಕಳೆದ ಹಲವು ವರ್ಷಗಳಿಂದ ನಡೆಯುತ್ತಿದ್ದು, 2023ರ ವಿದ್ಯುತ್ ತಿದ್ದುಪಡಿ ಕಾಯ್ದೆ ಮೂಲಕ ಅದಕ್ಕೆ ಮತ್ತಷ್ಟು ವೇಗ ನೀಡಲಾಗಿದೆ ಎಂದು ಆರೋಪಿಸಿದರು.




ಪ್ರೀ-ಪೇಯ್ಡ್ ಸ್ಮಾರ್ಟ್ ಮೀಟರ್ ಅಳವಡಿಕೆ ಹೆಸರಿನಲ್ಲಿ ದೇಶದ ಕೋಟ್ಯಂತರ ಗ್ರಾಹಕರಿಂದ ಸಾವಿರಾರು ಕೋಟಿ ರೂಪಾಯಿ ಸಂಗ್ರಹಿಸಿ ಅದಾನಿ ಹಾಗೂ ಟಾಟಾ ಕಂಪನಿಗಳಿಗೆ ಲಾಭ ಮಾಡಿಕೊಡುವ ಪ್ರಯತ್ನ ನಡೆಯುತ್ತಿದೆ ಎಂದು ಅವರು ದೂರಿದರು.

ರೈತ ಮುಖಂಡರಾದ ಈರಣ್ಣ ಕರವೀರಮಠ, ಸಂತೋಷ ಮಠದ, ಪರಶುರಾಮ ವಡ್ಡರ, ಎಸ್.ಪಿ. ಕಾಡಸಿದ್ದೇಶ್ವರಮಠ ಹಾಗೂ ಮಲ್ಲಪ್ಪ ಮಠದ ಮಾತನಾಡಿ, ಖಾಸಗೀಕರಣ ಜಾರಿಯಾದರೆ ಗೃಹ ಜ್ಯೋತಿ, ಭಾಗ್ಯ ಜ್ಯೋತಿ, ಕುಟೀರ ಜ್ಯೋತಿ, ಗಂಗಾ ಕಲ್ಯಾಣ ಸೇರಿದಂತೆ ಜನಪರ ಯೋಜನೆಗಳು ಅಪಾಯಕ್ಕೆ ಸಿಲುಕಲಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಸರ್ಕಾರ ಖಾಸಗೀಕರಣ ಪ್ರಕ್ರಿಯೆಯಿಂದ ಹಿಂದೆ ಸರಿಯದಿದ್ದರೆ ರಾಜ್ಯಾದ್ಯಂತ ಬಂದ್, ಜೈಲ್ ಭರೋ, ಬಾರ್ಕೋಲ್ ಚಳವಳಿ ಸೇರಿದಂತೆ ವಿವಿಧ ಹೋರಾಟಗಳನ್ನು ಹಮ್ಮಿಕೊಳ್ಳುವುದಾಗಿ ಎಚ್ಚರಿಸಿದರು.

> "ವಿದ್ಯುತ್ ಖಾಸಗೀಕರಣಗೊಂಡರೆ ರೈತರ ಬದುಕು ಕತ್ತಲಲ್ಲಿ ಮುಳುಗಲಿದೆ. ಸಬ್ಸಿಡಿ ಕಡಿತವಾಗಲಿದೆ, ದರ ಏರಿಕೆಯಾಗಲಿದೆ. ಸರ್ಕಾರ ಜನಪರ ನಿಲುವು ಕೈಬಿಟ್ಟು ಕಾರ್ಪೊರೇಟ್ ಪರ ನಿಂತರೆ ರಾಜ್ಯಾದ್ಯಂತ ಉಗ್ರ ಹೋರಾಟ ಅನಿವಾರ್ಯ."
> 
> **– ಶಂಕರಗೌಡ ಜಯನಗೌಡ್ರ,** ಜಿಲ್ಲಾ ಅಧ್ಯಕ್ಷರು, ರೈತ ಸಂಘ ಮತ್ತು ಹಸಿರು ಸೇನೆ

ಜುಲೈ 22ರಂದು ಗದಗ ಜಿಲ್ಲಾಧಿಕಾರಿ ಕಚೇರಿ ಎದುರು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.


ಮನವಿ ಸ್ವೀಕರಿಸಿದ ಉಪ ತಹಸೀಲ್ದಾರ್ ಎಸ್.ಎಸ್. ಬಿಚ್ಚಾಲಿ, ರೈತರ ಬೇಡಿಕೆಗಳನ್ನು ಜಿಲ್ಲಾಡಳಿತ ಹಾಗೂ ಸರ್ಕಾರದ ಗಮನಕ್ಕೆ ತರಲಾಗುವುದು ಎಂದು ಭರವಸೆ ನೀಡಿದರು.

# ಇಂದು 'ಸದಾಶಿವಾನಂದ' ಸಂಸ್ಮರಣ ಗ್ರಂಥ ಲೋಕಾರ್ಪಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಗದಗ ವತಿಯಿಂದ ಕವಿ, ಸಂಘಟಕ ಹಾಗೂ ಬೋಧಕರಾಗಿದ್ದ ಶಿವಾನಂದ ಗಿಡ್ನಂದಿ ಅವರ ಜೀವನ-ಸಾಧನೆಯನ್ನು ಸ್ಮರಿಸುವ 'ಸದಾಶಿವಾನಂದ' ಸಂಸ್ಮರಣ ಗ್ರಂಥದ ಲೋಕಾರ್ಪಣೆ ಸಮಾರಂಭವು ಜೂನ್ 21ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಎಪಿಎಂಸಿ ಆವರಣದ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಸಭಾಂಗಣದಲ್ಲಿ ನಡೆಯಲಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ಶಾಂತಲಿಂಗ ಮಹಾಸ್ವಾಮಿಗಳು, ದೊರೆಸ್ವಾಮಿ ವಿರಕ್ತಮಠ, ಭೈರನಹಟ್ಟಿ ಹಾಗೂ ತೋಂಟದಾರ್ಯಮಠ, ಶಿರೋಳ ವಹಿಸಲಿದ್ದಾರೆ. ಪ್ರೊ. ಎಸ್.ವಿ. ಸಂಕನೂರ, ವಿಧಾನ ಪರಿಷತ್ ಸದಸ್ಯರು, ಬೆಂಗಳೂರು ಅವರು ಸಂಸ್ಮರಣ ಗ್ರಂಥವನ್ನು ಲೋಕಾರ್ಪಣೆ ಮಾಡಲಿದ್ದಾರೆ.




ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಅಧ್ಯಕ್ಷತೆ ವಹಿಸಲಿದ್ದು, ಡಾ. ಎಚ್.ಬಿ. ಪೂಜಾರ ಅವರು ಗ್ರಂಥ ಪರಿಚಯ ಮಾಡಿಕೊಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಸಚಿವ ಎಸ್.ಎಸ್. ಪಾಟೀಲ, ಖ್ಯಾತ ಸಾಹಿತಿ ಪ್ರೊ. ಚಂದ್ರಶೇಖರ ವಸ್ತ್ರದ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಡಯಟ್ ಪ್ರಾಚಾರ್ಯ ಕೆ.ಡಿ. ಬಡಿಗೇರ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ.

ಶ್ರೀಮತಿ ಶಕುಂತಲಾ ಶಿವಾನಂದ ಗಿಡ್ನಂದಿ ಉಪಸ್ಥಿತರಿರಲಿದ್ದು, ಎಸ್.ಜಿ. ಕಡೇಮನಿ ಪ್ರಾಸ್ತಾವಿಕ ನುಡಿಯನ್ನಾಡಲಿದ್ದಾರೆ. ಇದೇ ವೇಳೆ ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ ಸುತಾರ ಅವರಿಂದ ಸಂಗೀತ ಕಾರ್ಯಕ್ರಮವೂ ಜರುಗಲಿದೆ.

ಸಾಹಿತ್ಯಾಭಿಮಾನಿಗಳು, ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಹಾಗೂ ರಾಹುಲ ಗಿಡ್ನಂದಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಜಿಲ್ಲೆಯ ರೈತರು ನಿಗದಿತ ಅವಧಿಯೊಳಗೆ ನೋಂದಣಿ ಮಾಡಿಕೊಳ್ಳಲು ಕೃಷಿ ಇಲಾಖೆಯ ಮನವಿ**

# ಮುಂಗಾರು ಬೆಳೆ ವಿಮೆ ನೋಂದಣಿಗೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

2026-27ನೇ ಸಾಲಿನ ಮುಂಗಾರು ಹಂಗಾಮಿಗಾಗಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ಅಧಿಸೂಚಿತ ಬೆಳೆಗಳಿಗೆ ಬೆಳೆ ವಿಮೆ ನೋಂದಣಿ ಪ್ರಕ್ರಿಯೆ ಆರಂಭಗೊಂಡಿದ್ದು, ಜಿಲ್ಲೆಯ ರೈತರು ನಿಗದಿತ ಅವಧಿಯೊಳಗೆ ನೋಂದಣಿ ಮಾಡಿಕೊಳ್ಳುವಂತೆ ಕೃಷಿ ಇಲಾಖೆ ಮನವಿ ಮಾಡಿದೆ.

ಯೋಜನೆಯಡಿ ಬೆಳೆ ಸಾಲ ಪಡೆದ ರೈತರಿಗೆ ಬೆಳೆ ವಿಮೆ ಕಡ್ಡಾಯವಾಗಿದ್ದು, ಬೆಳೆ ಸಾಲ ಪಡೆಯದ ರೈತರಿಗೆ ಇದು ಐಚ್ಛಿಕವಾಗಿರುತ್ತದೆ. ಪ್ರಸಕ್ತ ಸಾಲಿನಲ್ಲಿ ಜಿಲ್ಲೆಗೆ ಇಂಡಸ್ ಇಂಡ್ ಜನರಲ್ ಇನ್ಸೂರೆನ್ಸ್ ಕಂಪನಿಯನ್ನು ಅನುಷ್ಠಾನ ಸಂಸ್ಥೆಯಾಗಿ ಆಯ್ಕೆ ಮಾಡಲಾಗಿದೆ.

ಬೆಳೆ ವಿಮೆ ಮಾಡಿಸಿಕೊಳ್ಳಲು ರೈತರು ಕಡ್ಡಾಯವಾಗಿ ಈಖಗಋಖಿಖ ಖಆ ಹೊಂದಿರಬೇಕು. ಪಹಣಿ, ಖಾತೆ ಪುಸ್ತಕ ಅಥವಾ ಕಂದಾಯ ರಶೀದಿಯಂತಹ ಅಗತ್ಯ ದಾಖಲೆಗಳೊಂದಿಗೆ ಬ್ಯಾಂಕ್, ಗ್ರಾಮ ಒನ್ ಕೇಂದ್ರ ಹಾಗೂ ಸಾರ್ವಜನಿಕ ಸೇವಾ ಕೇಂದ್ರಗಳ ಮೂಲಕ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಪ್ರಕೃತಿ ವಿಕೋಪಗಳಾದ ಆಲಿಕಲ್ಲು ಮಳೆ, ಭೂಕುಸಿತ, ಬೆಳೆ ಮುಳುಗಡೆ, ಮೇಘಸ್ಫೋಟ, ಗುಡುಗು-ಮಿಂಚು ಹಾಗೂ ಬೆಂಕಿ ಅವಘಡಗಳಿಂದ ಉಂಟಾಗುವ ಬೆಳೆ ನಷ್ಟಕ್ಕೂ ಯೋಜನೆಯಡಿ ಪರಿಹಾರ ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಬೆಳೆ ನಷ್ಟ ಸಂಭವಿಸಿದಲ್ಲಿ ರೈತರು 72 ಗಂಟೆಗಳೊಳಗೆ ಸಂಬಂಧಿಸಿದ ವಿಮಾ ಸಂಸ್ಥೆಗೆ ಮಾಹಿತಿ ನೀಡಬೇಕು ಎಂದು ಇಲಾಖೆ ತಿಳಿಸಿದೆ.

ರೈತರು ತಮ್ಮ ಜಮೀನಿನಲ್ಲಿ ಬಿತ್ತಿರುವ ಬೆಳೆಯ ಮಾಹಿತಿಯನ್ನು ಮಾತ್ರ ಅರ್ಜಿಯಲ್ಲಿ ನಮೂದಿಸಬೇಕು. ಬಿತ್ತನೆಗೊಂಡ ಬೆಳೆ ಕನಿಷ್ಠ 30 ದಿನಗಳಷ್ಟು ಬೆಳವಣಿಗೆಯ ಹಂತದಲ್ಲಿರಬೇಕು. ಬೆಳೆ ಸಮೀಕ್ಷೆ ಕಡ್ಡಾಯವಾಗಿರುವುದರಿಂದ ಬಿತ್ತದೆ ಇರುವ ಬೆಳೆಗೆ ವಿಮೆ ಮಾಡಿಸಿದರೆ ಪರಿಹಾರಕ್ಕೆ ಅರ್ಹತೆ ಇರುವುದಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ರೈತರು ಸಮೀಪದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಅಥವಾ ಸಂಬಂಧಿತ ವಿಮಾ ಸಂಸ್ಥೆಯನ್ನು ಸಂಪರ್ಕಿಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಬೆಳೆವಾರು ವಿಮೆ ನೋಂದಣಿಗೆ ಕೊನೆಯ ದಿನಾಂಕಗಳು ಹೀಗಿವೆ**

ಜುಲೈ 15: ಹೆಸರು ಹಾಗೂ ಹತ್ತಿ ಬೆಳೆ

ಜುಲೈ 31: ಗೋವಿನಜೋಳ, ಸಜ್ಜೆ, ತೊಗರಿ, ಶೇಂಗಾ ಹಾಗೂ ಭತ್ತ

ಆಗಸ್ಟ್ 14: ಸೂರ್ಯಕಾಂತಿ ಬೆಳೆ

# ಎಪಿಎಂಸಿ ವಿದ್ಯುತ್ ಸಮಸ್ಯೆ ಪರಿಹಾರಕ್ಕೆ ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಕೃಷಿ ಉತ್ಪನ್ನ ಮಾರುಕಟ್ಟೆ (ಎಪಿಎಂಸಿ) ಆವರಣದಲ್ಲಿ ಎದುರಾಗಿರುವ ವಿದ್ಯುತ್ ಸಮಸ್ಯೆ ಪರಿಹರಿಸುವಂತೆ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ನಿಯೋಗವು ಹೆಸ್ಕಾಂನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಜೇಶ ಕಲ್ಯಾಣಶೆಟ್ಟರ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿತು.

ಸಂಸ್ಥೆಯ ಹಿರಿಯ ಮುಖಂಡ ಈಶ್ವರಪ್ಪ ಮುನವಳ್ಳಿ ನೇತೃತ್ವದ ನಿಯೋಗವು ಎಪಿಎಂಸಿ ವ್ಯಾಪ್ತಿಯಲ್ಲಿನ ವಿದ್ಯುತ್ ಸಮಸ್ಯೆ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿ, ಶೀಘ್ರ ಪರಿಹಾರ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿತು.

ಈ ಸಂದರ್ಭದಲ್ಲಿ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ, ಉಪಾಧ್ಯಕ್ಷ ಜಯದೇವ ಮೆಣಸಗಿ, ಪ್ರಕಾಶ ಉಗಲಾಟ, ಶಿದ್ರಾಮಪ್ಪ ಉಮಚಗಿ, ಡಿ.ವಿ. ಗಣಾಚಾರಿ ಉಪಸ್ಥಿತರಿದ್ದರು ಎಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಚೆನ್ನವೀರ ಹುಣಸೀಕಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದಲ್ಲಿ ಯೋಗ ಅರಿವು ಶಿಬಿರ**

# ಮಹಿಳೆಯರ ಆರೋಗ್ಯಕ್ಕೆ ಯೋಗವೇ ಸಂಜೀವಿನಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳೆಯರಲ್ಲಿ ಹೆಚ್ಚುತ್ತಿರುವ ದೈಹಿಕ ಹಾಗೂ ಮಾನಸಿಕ ಆರೋಗ್ಯ ಸಮಸ್ಯೆಗಳಿಗೆ ಯೋಗವು ಪರಿಣಾಮಕಾರಿ ಪರಿಹಾರವಾಗಿದ್ದು, ನಿಯಮಿತ ಯೋಗಾಭ್ಯಾಸದಿಂದ ಆರೋಗ್ಯಕರ ಜೀವನ ನಡೆಸಲು ಸಾಧ್ಯ ಎಂದು ತೋಂಟದಾರ್ಯ ಪ್ರೌಢಶಾಲೆಯ ಶಿಕ್ಷಕಿ ಸುಮಾ ಬಿ. ಹಿಟಬುತ್ತಿ ಹೇಳಿದರು.

12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಎಸ್.ವೈ.ಬಿ.ಎಂ.ಎಸ್. ಯೋಗಪಾಠಶಾಲೆಯ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ವತಿಯಿಂದ ಸಿದ್ಧಲಿಂಗನಗರದ ಬಸವ ಯೋಗ ಮಂದಿರದಲ್ಲಿ ಹಮ್ಮಿಕೊಂಡಿದ್ದ ಮಹಿಳೆಯರ ಯೋಗ ಅರಿವು-ಆಚಾರ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆಧುನಿಕ ಜೀವನಶೈಲಿಯಿಂದ ಮಹಿಳೆಯರಲ್ಲಿ ಮಾನಸಿಕ ಒತ್ತಡ, ಬೊಜ್ಜು ಸೇರಿದಂತೆ ಹಲವು ಆರೋಗ್ಯ ಸಮಸ್ಯೆಗಳು ಹೆಚ್ಚಾಗುತ್ತಿವೆ. ಯೋಗಾಸನ, ಪ್ರಾಣಾಯಾಮ ಹಾಗೂ ಧ್ಯಾನವು ಇಂತಹ ಸಮಸ್ಯೆಗಳನ್ನು ನಿಯಂತ್ರಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತವೆ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರು ಮಾತನಾಡಿ, ಯೋಗ ದಿನಾಚರಣೆಗೆ ಮಾತ್ರ ಯೋಗಾಭ್ಯಾಸ ಸೀಮಿತವಾಗದೆ ಪ್ರತಿನಿತ್ಯದ ಬದುಕಿನ ಭಾಗವಾಗಬೇಕು. ಆಗ ಮಾತ್ರ ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯ ಎಂದರು.




> "ಔಷಧಿಗಿಂತ ಯೋಗವೇ ಉತ್ತಮ ಚಿಕಿತ್ಸೆ. ನಿಯಮಿತ ಯೋಗಾಭ್ಯಾಸ ಮಹಿಳೆಯರನ್ನು ದೈಹಿಕವಾಗಿ ಮತ್ತು ಮಾನಸಿಕವಾಗಿ ಸದೃಢರನ್ನಾಗಿಸುತ್ತದೆ."

ವೇದಿಕೆಯಲ್ಲಿ ಪಾರ್ವತಿ ಭೂಮಾ, ಗಿರಿಜಾ ಅಂಗಡಿ, ಅರುಣಾ ಇಂಗಳ್ಳಿ ಹಾಗೂ ಯೋಗ ಶಿಕ್ಷಕಿ ಜಯಶ್ರೀ ಡಾವಣಗೇರಿ ಉಪಸ್ಥಿತರಿದ್ದರು. ಜೂನ್ 21ರವರೆಗೆ ಶಿಬಿರ ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಆಯೋಜಕರು ಮನವಿ ಮಾಡಿದ್ದಾರೆ.

# ನಿಧನ

## ಶರಣಬಸಪ್ಪ ಜುಟ್ಲ



ನರೇಗಲ್ಲ: ಪಟ್ಟಣದ ಹಿರೇಮಠ ಓಣಿಯ ಹಿರಿಯರು ಹಾಗೂ ಜಗದ್ಗುರು ಪಂಚಾಚಾರ್ಯ ಗ್ರಾಮೀಣಾಭಿವೃದ್ಧಿ ಶಿಕ್ಷಣ ಸಂಸ್ಥೆಯ ಖಜಾಂಚಿಯಾಗಿದ್ದ ಶರಣಬಸಪ್ಪ ಬಸಪ್ಪ ಜುಟ್ಲ (67) ಅವರು ಶುಕ್ರವಾರ ಮಧ್ಯರಾತ್ರಿ ನಿಧನರಾದರು.

ಮೃತರು ಪತ್ನಿ, ಇಬ್ಬರು ಪುತ್ರಿಯರು, ಒಬ್ಬ ಪುತ್ರ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಅವರ ನಿಧನಕ್ಕೆ ವಿವಿಧ ಕ್ಷೇತ್ರಗಳ ಗಣ್ಯರು, ಸ್ನೇಹಿತರು ಹಾಗೂ ಸಾರ್ವಜನಿಕರು ಸಂತಾಪ ಸೂಚಿಸಿದ್ದಾರೆ.

**ಕಂಬನಿ ಮಿಡಿದ ಶ್ರೀಗಳು:** ನರೇಗಲ್ಲ ಹಿರೇಮಠ ಹಾಗೂ ಸೌದತ್ತಿ ಮೂಲಿಮಠದ ಪೀಠಾಧಿಪತಿಗಳಾದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮೀಜಿಗಳು ಶರಣಬಸಪ್ಪ ಜುಟ್ಲ ಅವರು ಶ್ರೀಮಠ ಹಾಗೂ ಶಿಕ್ಷಣ ಸಂಸ್ಥೆಗೆ ಸಲ್ಲಿಸಿದ ಸೇವೆಯನ್ನು ಸ್ಮರಿಸಿಕೊಂಡು, ಅವರ ಅಗಲಿಕೆಗೆ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

## ಕೆ. ಸುಧಾಕರರಾವ್



ಗದಗ: ಗದಗ ಹೊಟೇಲ್ ಒಡೆಯರ ಸಂಘದ ಮಾಜಿ ಅಧ್ಯಕ್ಷರು ಹಾಗೂ ನಗರದ ಖ್ಯಾತ ದುರ್ಗಾವಿಹಾರ ಮಾಲೀಕರಾದ ಕೆ. ಸುಧಾಕರರಾವ್ (77) ಅವರು ಶನಿವಾರ ಮಧ್ಯಾಹ್ನ ನಿಧನರಾದರು.

ಮೃತರು ಓರ್ವ ಪುತ್ರ, ಇಬ್ಬರು ಪುತ್ರಿಯರು, ಸೊಸೆ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆಯು ಜೂನ್ 21ರ ಭಾನುವಾರ ಬೆಳಿಗ್ಗೆ 8 ಗಂಟೆಗೆ ಹುಬ್ಬಳ್ಳಿ ರಸ್ತೆಯ ಕೇಶವ ನಗರದ ಅವರ ಸ್ವಗೃಹದಿಂದ ಹೊರಡಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸಂತಾಪ: ಕೆ. ಸುಧಾಕರರಾವ್ ಅವರ ನಿಧನಕ್ಕೆ ಗದಗ ಹೊಟೇಲ್ ಒಡೆಯರ ಸಂಘದ ಪದಾಧಿಕಾರಿಗಳು, ಶ್ರೀ ಗುರು ರಾಘವೇಂದ್ರಸ್ವಾಮಿ ಉತ್ಸವ ಮಂಡಳಿ, ಶ್ರೀ ವೀರನಾರಾಯಣ ಯುವಕ ಮಂಡಳ, ಶ್ರೀ ಲಕ್ಷ್ಮೀನಾರಾಯಣ ಮಹಿಳಾ ಮಂಡಳ, ಶ್ರೀ ಮಹಾಲಕ್ಷ್ಮೀ ಯುವತಿ ಮಂಡಳ, ಶ್ರೀಕೃಷ್ಣ ಸೇವಾ ಪ್ರತಿಷ್ಠಾನ ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಸಂತಾಪ ಸೂಚಿಸಿದ್ದಾರೆ. ಶಾಸಕ ಎಚ್.ಕೆ. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು, ಗದಗ ಬ್ರಾಹ್ಮಣ ಸಮಾಜದ ಪದಾಧಿಕಾರಿಗಳು ಸೇರಿದಂತೆ ಅನೇಕ ಗಣ್ಯರು ಅವರ ಅಗಲಿಕೆಗೆ ಕಂಬನಿ ಮಿಡಿದಿದ್ದಾರೆ.

**ಬಡವರ ಸೌಲಭ್ಯ ಕಡಿತದ ವಿರುದ್ಧ ರಾಜ್ಯ ಮಟ್ಟದ ಸಮ್ಮೇಳನದಲ್ಲಿ ಸ್ವಾಮೀಜಿ ಕಿಡಿ**

# ಗ್ಯಾರಂಟಿಗೆ ಗಂಡಾಂತರ; ಸ್ಲಂ ಜನರ ಆಕ್ರೋಶ

■ವಿಜಯಸಾಕ್ಷಿ ಸುದ್ದಿ, ಗದಗ

ಬಡಜನರ ಕಲ್ಯಾಣ, ಉಚಿತ ಶಿಕ್ಷಣ, ಆರೋಗ್ಯ ಹಾಗೂ ವಸತಿ ಭರವಸೆ ನೀಡಿ ಅಧಿಕಾರಕ್ಕೆ ಬರುವ ಸರ್ಕಾರಗಳು ಬಳಿಕ ಶ್ರೀಮಂತರು ಹಾಗೂ ಕಾರ್ಪೊರೇಟ್ ಕಂಪನಿಗಳ ಪರವಾಗಿ ಕೆಲಸ ಮಾಡುತ್ತಿರುವುದು ವಿಷಾದನೀಯ ಎಂದು ಬೇಲೂರು ಗುರುಬಸವೇಶ್ವರ ಮಠದ ಪರಮಪೂಜ್ಯ ಡಾ. ಪ್ರಭು ಮಹಾಂತ ಮಹಾಸ್ವಾಮೀಜಿ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಲಾಯನ್ಸ್ ಭವನದಲ್ಲಿ ಶನಿವಾರ ಸ್ಲಂ ಜನಾಂದೋಲನ-ಕರ್ನಾಟಕ, ಸಾವಿತ್ರಿಬಾಯಿ ಫುಲೆ ಮಹಿಳಾ ಸಂಘಟನೆ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ಸಹಯೋಗದಲ್ಲಿ ನಡೆದ ರಾಜ್ಯ ಮಟ್ಟದ ಪ್ರತಿನಿಧಿಗಳ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.



ಗ್ಯಾರಂಟಿ ಯೋಜನೆಗಳ ಆಧಾರದಲ್ಲಿ ಅಧಿಕಾರಕ್ಕೆ ಬಂದ ಸರ್ಕಾರ ಇದೀಗ ಫಲಾನುಭವಿಗಳ ಮರುಪರಿಶೀಲನೆ ನಡೆಸುತ್ತಿರುವುದು ಬಡವರಿಗೆ ದೊರೆಯುತ್ತಿರುವ ಸೌಲಭ್ಯಗಳನ್ನು ಕಸಿದುಕೊಳ್ಳುವ ಪ್ರಯತ್ನವಾಗಿದೆ. ಸ್ಲಂ ನಿವಾಸಿಗಳ ಹಕ್ಕುಗಳಿಗೆ ಸರ್ಕಾರ ಆದ್ಯತೆ ನೀಡಬೇಕು. ಬಡವರ ಹೋರಾಟಗಳಿಗೆ ತಾವು ಸದಾ ಬೆಂಬಲವಾಗಿ ನಿಲ್ಲುವುದಾಗಿ ಭರವಸೆ ನೀಡಿದರು. ಸಮ್ಮೇಳನದ ಪ್ರಾಸ್ತಾವಿಕವಾಗಿ ಮಾತನಾಡಿದ ರಾಜ್ಯ ಸಂಚಾಲಕ ಎ. ನರಸಿಂಹಮೂರ್ತಿ, ಚುನಾವಣಾ ಪೂರ್ವದಲ್ಲಿ ನೀಡಿದ್ದ ಭರವಸೆಗಳನ್ನು ಸರ್ಕಾರ ಮರೆತಿದೆ. ಸ್ಲಂ ನಿವಾಸಿಗಳಿಗೆ ಉಚಿತ ಮನೆ, ನಿವೇಶನ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು. ಪ್ರಗತಿಪರ ಚಿಂತಕ ಬಸವರಾಜ ಸೂಳಿಬಾವಿ ಮಾತನಾಡಿ, ದೇಶದಲ್ಲಿ ಸಾರ್ವಜನಿಕ ಆಸ್ತಿಗಳ ಖಾಸಗೀಕರಣ ವೇಗವಾಗಿ ನಡೆಯುತ್ತಿದ್ದು, ಬಡವರು ಇನ್ನೂ ಮನೆ ಹಾಗೂ ನಿವೇಶನಕ್ಕಾಗಿ ಹೋರಾಟ ನಡೆಸುವ ಪರಿಸ್ಥಿತಿ ಮುಂದುವರಿದಿರುವುದು ಸರ್ಕಾರಗಳ ವೈಫಲ್ಯಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು. ಸಮ್ಮೇಳನಕ್ಕೂ ಮುನ್ನ ಗದಗ-ಬೆಟಗೇರಿ ನಗರಸಭೆ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಬೃಹತ್ ಜಾಥಾ ನಡೆಸಲಾಯಿತು. ನಗರದ ಪ್ರಮುಖ ಬೀದಿಗಳ ಮೂಲಕ ಸಂಚರಿಸಿದ ಜಾಥಾದಲ್ಲಿ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ನೂರಾರು ಪ್ರತಿನಿಧಿಗಳು ಭಾಗವಹಿಸಿದ್ದರು.

> "ಬಡವರ ಪರವಾಗಿ ಕೆಲಸ ಮಾಡುತ್ತೇವೆ ಎಂದು ಅಧಿಕಾರಕ್ಕೆ ಬಂದ ಸರ್ಕಾರಗಳು ಇಂದು ಕಾರ್ಪೊರೇಟ್ ಕಂಪನಿಗಳ ಹಿತಾಸಕ್ತಿಗೆ ಹೆಚ್ಚು ಆದ್ಯತೆ ನೀಡುತ್ತಿವೆ. ಸ್ಲಂ ಜನರ ಹಕ್ಕುಗಳಿಗೆ ಸರ್ಕಾರಗಳು ನ್ಯಾಯ ಒದಗಿಸಬೇಕು."
> 
> **ಡಾ. ಪ್ರಭು ಮಹಾಂತ ಮಹಾಸ್ವಾಮೀಜಿ, ಬೇಲೂರು ಗುರುಬಸವೇಶ್ವರ ಮಠ**

ಕಾರ್ಯಕ್ರಮದಲ್ಲಿ ಚಂದ್ರಮ್ಮ ಅಧ್ಯಕ್ಷತೆ ವಹಿಸಿದ್ದರು. ಎಂ.ಎಸ್. ಹಡಪದ, ಬಸವರಾಜ ಪೂಜಾರ, ಪೂರ್ಣ ರವಿಶಂಕರ್, ವೆಂಕಟೇಶಯ್ಯ, ಶೇಖಣ್ಣ ಕವಳಿಕಾಯಿ, ಇಮ್ತಿಯಾಜ್ ಆರ್. ಮಾನ್ವಿ, ಅಶೋಕ ಕುಡತಿನಿ, ಜನಾರ್ಧನ ಹಳ್ಳಿಬೆಂಚಿ, ಶೋಭಾ ಕಮತರ, ರೇಣುಕಾ ಸರಡಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬೆಳೆ ಸಂರಕ್ಷಣೆಗೆ ರೈತರಿಗೆ ಕೃಷಿ ಇಲಾಖೆ ಸಲಹೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಜೂನ್ ತಿಂಗಳಲ್ಲಿ ಇದುವರೆಗೆ ವಾಡಿಕೆಗಿಂತ ಶೇ.18ರಷ್ಟು ಮಳೆ ಕೊರತೆ ದಾಖಲಾಗಿರುವ ಹಿನ್ನೆಲೆಯಲ್ಲಿ ಮುಂಗಾರು ಬೆಳೆಗಳ ಸಂರಕ್ಷಣೆಗೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಕೃಷಿ ಇಲಾಖೆ ರೈತರಿಗೆ ಸಲಹೆ ನೀಡಿದೆ.

ಗದಗ ಜಿಲ್ಲೆಯಲ್ಲಿ ಬಿತ್ತನೆಯಾಗಿರುವ ಹೆಸರು, ಉದ್ದು, ಹತ್ತಿ, ಮೆಕ್ಕೆಜೋಳ ಹಾಗೂ ಜೋಳ ಸೇರಿದಂತೆ ವಿವಿಧ ಮುಂಗಾರು ಬೆಳೆಗಳು 20 ರಿಂದ 25 ದಿನಗಳ ಬೆಳವಣಿಗೆಯ ಹಂತದಲ್ಲಿದ್ದು, ತೇವಾಂಶದ ಕೊರತೆಯನ್ನು ಎದುರಿಸುತ್ತಿವೆ. ಹೀಗಾಗಿ ರೈತರು ಬೆಳೆಗಳ ರಕ್ಷಣೆಗೆ ತಕ್ಷಣ ಕ್ರಮವಹಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಳೆ ಕೊರತೆ ಮುಂದುವರಿದರೆ ಜೋಳ ಬೆಳೆಯಲ್ಲಿ ಸಸಿ ಸಂಖ್ಯೆ ಕಡಿಮೆಯಿರುವ ಜಾಗಗಳಲ್ಲಿ ಮರುಬಿತ್ತನೆ ಮಾಡುವುದು, ಹೆಸರು ಹಾಗೂ ಉದ್ದು ಬೆಳೆಗಳಲ್ಲಿ ಅಗತ್ಯ ನಿರ್ವಹಣಾ ಕ್ರಮ ಕೈಗೊಳ್ಳುವುದು ಸೂಕ್ತವಾಗಿದೆ. ಮೆಕ್ಕೆಜೋಳ ಬೆಳೆಯಲ್ಲಿ ಖಾಲಿ ಜಾಗಗಳನ್ನು ಭರ್ತಿ ಮಾಡುವುದರ ಜೊತೆಗೆ ಕಳೆ ನಿಯಂತ್ರಣಕ್ಕೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಲಾಗಿದೆ. ಸಾಧ್ಯವಾದ ರೈತರು ಜೀವ ರಕ್ಷಕ ನೀರಾವರಿ ಒದಗಿಸಬೇಕು. ಮಣ್ಣಿನಲ್ಲಿರುವ ತೇವಾಂಶವನ್ನು ಹೆಚ್ಚು ಕಾಲ ಉಳಿಸಿಕೊಳ್ಳಲು ಮಲ್ಚಿಂಗ್ (ಹೊದಿಕೆ) ವಿಧಾನ ಅಳವಡಿಸಬೇಕು. ಬೆಳೆಗಳ ಮಧ್ಯೆ ಬೆಳೆಯುವ ಕಳೆಗಳನ್ನು ನಿಯಂತ್ರಿಸುವುದು ಹಾಗೂ ಒಣಗಿದ ಬೆಳೆ ಅವಶೇಷಗಳನ್ನು ಹೊದಿಕೆಯಾಗಿ ಬಳಸುವುದು ತೇವಾಂಶ ಸಂರಕ್ಷಣೆಗೆ ಸಹಕಾರಿಯಾಗಲಿದೆ ಎಂದು ಇಲಾಖೆ ತಿಳಿಸಿದೆ.

ಮಕ್ಕಳಲ್ಲಿ ಸೃಜನಶೀಲತೆ, ನಾಯಕತ್ವ ಕೌಶಲ್ಯ ಬೆಳೆಸುವ ಮಹತ್ವದ ಕಾರ್ಯಕ್ರಮ : ಬಿಇಒ ಮುಂದಿನಮನಿ

# ಸಂಭ್ರಮ ಶನಿವಾರಕ್ಕೆ ಅದ್ದೂರಿ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಿಗೆ ಸಂತಸದಾಯಕ ಹಾಗೂ ಅನುಭವಾತ್ಮಕ ಕಲಿಕೆಯನ್ನು ಒದಗಿಸುವ 'ಸಂಭ್ರಮ ಶನಿವಾರ' ಕಾರ್ಯಕ್ರಮವು ಮಕ್ಕಳಲ್ಲಿ ಸೃಜನಶೀಲತೆ, ನಾಯಕತ್ವ ಮತ್ತು ಸಂವಹನ ಕೌಶಲ್ಯಗಳನ್ನು ಬೆಳೆಸುವ ಅತ್ಯುತ್ತಮ ಶೈಕ್ಷಣಿಕ ಕಾರ್ಯಕ್ರಮವಾಗಿದೆ ಎಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಎಂ. ಮುಂದಿನಮನಿ ಹೇಳಿದರು.

ನಗರದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ನಂ.1ರಲ್ಲಿ ಶನಿವಾರ 2026–27ನೇ ಸಾಲಿನ ಶೈಕ್ಷಣಿಕ ವರ್ಷದ ಮೊದಲ 'ಸಂಭ್ರಮ ಶನಿವಾರ' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಮೂಲಕ ಮಕ್ಕಳ ಭವಿಷ್ಯ ರೂಪಿಸುವ ಕಾರ್ಯವನ್ನು ಶಿಕ್ಷಕರು ಸಮರ್ಪಕವಾಗಿ ನಿರ್ವಹಿಸುತ್ತಿದ್ದು, ಸಮುದಾಯದವರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲಿಸುವ ಮೂಲಕ ಶೈಕ್ಷಣಿಕ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.



ಕ್ಷೇತ್ರ ಸಮನ್ವಯ ಅಧಿಕಾರಿ ಎಸ್.ಪಿ. ಪ್ರಭಯ್ಯನಮಠ ಮಾತನಾಡಿ, ವಿಶೇಷ ಚೇತನ ವಿದ್ಯಾರ್ಥಿಗಳ ಪಾಲಕರನ್ನು ಮಕ್ಕಳೊಂದಿಗೆ ಸನ್ಮಾನಿಸುವ ಮೂಲಕ ಅವರ ಜೀವನ ಸಾಧನೆಗಳನ್ನು ಪರಿಚಯಿಸಲಾಗುತ್ತಿದೆ. ಇದರಿಂದ ವಿಶೇಷ ಚೇತನರ ಬಗ್ಗೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿ, ಅವರನ್ನು ಮುಖ್ಯವಾಹಿನಿಗೆ ತರುವ ಪ್ರಯತ್ನಕ್ಕೆ ಬಲ ಸಿಗಲಿದೆ ಎಂದು ಹೇಳಿದರು.


ಶಿಕ್ಷಣ ಸಂಯೋಜಕ ಮುರಳಿ ಸೊಲಾಪೂರ ಸ್ವಾಗತಿಸಿದರು. ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಆರ್.ಬಿ. ಹೊಸಮನಿ ಕಾರ್ಯಕ್ರಮ ನಿರೂಪಿಸಿ, ಸರ್ವಮಂಗಳಾ ಗುಜಮಾಗಡಿ ವಂದಿಸಿದರು.

ಕಾರ್ಯಕ್ರಮದಲ್ಲಿ ಶಾಲಾ ಮುಖ್ಯೋಪಾಧ್ಯಾಯಿನಿ ವಿಜಯಾ ಜಕರಡ್ಡಿ, ಪವಿತ್ರಾ ಹಿರೇಮಠ, ಸುನಂದಾ ಕುಂಟೋಜಿ, ಹೇಮಲತಾ ಆಸಂಗಿ ಸೇರಿದಂತೆ ಶಿಕ್ಷಕರು, ಪಾಲಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಲವ್, ಆಕ್ಷನ್, ಫ್ಯಾಮಿಲಿ ಸಸ್ಪೆನ್ಸ್ ಥ್ರಿಲ್ಲರ್ ಕಥಾಹಂದರದೊಂದಿಗೆ ಪ್ರೇಕ್ಷಕರ ಮುಂದೆ ಹೊಸ ರಕ್ಷಕ

# ಜೂ. 26ಕ್ಕೆ ರಾಜ್ಯಾದ್ಯಂತ 'ರಕ್ಷಕ-2' ಅಬ್ಬರ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಸರ್ವೇಶ್ ಸ್ಟುಡಿಯೋ ಬ್ಯಾನರ್ ಅಡಿಯಲ್ಲಿ ನಿರ್ಮಾಣಗೊಂಡಿರುವ 'ರಕ್ಷಕ-2' ಕನ್ನಡ ಚಲನಚಿತ್ರವು ಜೂನ್ 26ರಂದು ರಾಜ್ಯಾದ್ಯಂತ ಬಿಡುಗಡೆಯಾಗಲಿದೆ.

ಈ ಹಿಂದೆ ಶತದಿನೋತ್ಸವ ಕಂಡ 'ರಕ್ಷಕ' ಹಾಗೂ 'ದೊಡ್ಡಣ್ಣ ಪುಟ್ಟಣ್ಣ' ಚಿತ್ರಗಳ ನಿರ್ದೇಶಕರಾದ ಡಾ. ಆರ್. ವಿಜಯಕುಮಾರ್ ನಟಿಸಿ, ನಿರ್ದೇಶಿಸಿರುವ ಮೂರನೇ ಚಿತ್ರ ಇದಾಗಿದೆ. ಲವ್, ಆಕ್ಷನ್, ಫ್ಯಾಮಿಲಿ, ಸಸ್ಪೆನ್ಸ್, ಥ್ರಿಲ್ಲರ್ ಹಾಗೂ ಕಾಮಿಡಿಯ ಸಮನ್ವಯದೊಂದಿಗೆ ಮೂಡಿ ಬಂದಿರುವ ಈ ಚಿತ್ರದಲ್ಲಿ ಮೂರು ಹಾಡುಗಳಿದ್ದು, ಕುಟುಂಬ ಸಮೇತ ಕುಳಿತು ವೀಕ್ಷಿಸಬಹುದಾದ ಮನರಂಜನಾ ಚಿತ್ರವಾಗಿದೆ.

ಚಿತ್ರದ ನಿರ್ದೇಶಕ ಡಾ. ಆರ್. ವಿಜಯಕುಮಾರ್ ಅವರು ಪ್ರಮುಖ ಪಾತ್ರದಲ್ಲಿ ದಕ್ಷ ಪೊಲೀಸ್ ಅಧಿಕಾರಿಯಾಗಿ ಅಭಿನಯಿಸಿದ್ದು, ಖ್ಯಾತ ಹಾಸ್ಯ ನಟ ಲಯಕೋಕಿಲ ಹೆಡ್ ಕಾನ್ಸ್ಟೆಬಲ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ನಾಯಕನಾಗಿ ರಾಜವಂಶಿ, ನಾಯಕಿಯಾಗಿ ರಾಧಿಕಾ, ಪ್ರಮುಖ ಪಾತ್ರದಲ್ಲಿ ಮಧುಶ್ರೀ ಅಭಿನಯಿಸಿದ್ದಾರೆ. ಹಿರಿಯ ನಟ ಸುರೇಂದ್ರ ಕುಮಾರ್ ಖಳನಾಯಕನಾಗಿ ನಟಿಸಿದ್ದು, ಮುರಳಿಕೃಷ್ಣ, ವಿಜಯ್ ಮಧಾಳೇ, ಅರವಿಂದ್ ಹಾಗೂ ರೋಹಿಣಿ ಸೇರಿದಂತೆ ಹಲವರು ಚಿತ್ರದಲ್ಲಿ ಅಭಿನಯಿಸಿದ್ದಾರೆ.

ಬೆಂಗಳೂರು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚಿತ್ರದ ಚಿತ್ರೀಕರಣ ನಡೆದಿದ್ದು, ಛಾಯಾಗ್ರಹಣವನ್ನು ವಿಜಯ್ ಮಧಾಳೇ ಮತ್ತು ಆಕಾಶ್, ಸಂಕಲನವನ್ನು ವಿಜಯ್ ಮಧಾಳೇ, ಸಾಹಸ ನಿರ್ದೇಶನವನ್ನು ವೈಲೆಂಟ್ ವೇಲು, ಪ್ರಸಾಧನವನ್ನು ಜೀವನ್ ನಿರ್ವಹಿಸಿದ್ದಾರೆ. ಡಾ. ಪ್ರಭು ಗಂಜಿಹಾಳ ಹಾಗೂ ಡಾ. ವೀರೇಶ ಹಂಡಿಗಿ ಚಿತ್ರದ ಸಾರ್ವಜನಿಕ ಸಂಪರ್ಕಾಧಿಕಾರಿಗಳಾಗಿದ್ದಾರೆ.

ಚಿತ್ರದ ಕಥೆ, ಚಿತ್ರಕಥೆ, ಸಂಭಾಷಣೆ, ಸಂಗೀತ ಮತ್ತು ನಿರ್ದೇಶನವನ್ನು ಡಾ. ಆರ್. ವಿಜಯಕುಮಾರ್ ವಹಿಸಿಕೊಂಡಿದ್ದು, ವಿ. ಶಿವ್ ಸರ್ವೇಶ್ ಚಿತ್ರವನ್ನು ನಿರ್ಮಿಸಿದ್ದಾರೆ. ವಿಎಸ್‌ಕೆ ಸಿನಿ ಕ್ರಿಯೇಷನ್ಸ್ ಸಂಸ್ಥೆ ಚಿತ್ರವನ್ನು ವಿಶಾಲ ಕರ್ನಾಟಕದಲ್ಲಿ ವಿತರಣೆ ಮಾಡುತ್ತಿದೆ.ಚಿತ್ರಮಂದಿರಗಳಿಗೆ ಆಗಮಿಸಿ 'ರಕ್ಷಕ-2' ಚಿತ್ರವನ್ನು ವೀಕ್ಷಿಸಿ ಪ್ರೋತ್ಸಾಹಿಸಬೇಕೆಂದು ನಿರ್ದೇಶಕ ಡಾ. ಆರ್. ವಿಜಯಕುಮಾರ್ ಮನವಿ ಮಾಡಿದ್ದಾರೆ.

ಉಚಿತ ಯೋಗ ಶಿಬಿರದಿಂದ ಆರಂಭವಾದ ಪಯಣಕ್ಕೆ ಕರ್ನಾಟಕ ವಿವಿಯ ಗೋಲ್ಡ್ ಮೆಡಲ್ ಗರಿ

# ಯೋಗದಿಂದ ರೋಗ ಗೆದ್ದ ಸಾಧಕಿ ರೂಪಾ ಸಂತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಯೋಗವು ಕೇವಲ ವ್ಯಾಯಾಮವಲ್ಲ, ಅದು ಬದುಕಿನ ಪರಿವರ್ತನೆಯ ಮಾರ್ಗ ಎಂಬುದನ್ನು ತಮ್ಮ ಜೀವನದಲ್ಲೇ ಸಾಬೀತುಪಡಿಸಿರುವವರು ಪಟ್ಟಣದ ಯೋಗ ಸಾಧಕಿ ರೂಪಾ ಕಲ್ಮೇಶ್ವರ ಸಂತಿ. ಆರೋಗ್ಯ ಸಮಸ್ಯೆಗಳನ್ನು ಯೋಗಾಭ್ಯಾಸದ ಮೂಲಕ ದೂರ ಮಾಡಿಕೊಂಡ ಅವರು ಇಂದು ರಾಜ್ಯ ಮಟ್ಟದಲ್ಲಿ ಗುರುತಿಸಿಕೊಂಡ ಯೋಗ ಸಾಧಕಿಯಾಗಿ ಹೊರಹೊಮ್ಮಿದ್ದಾರೆ.

ಬಾಲ್ಯದಿಂದಲೇ ಶಿಕ್ಷಣ ಮತ್ತು ಯೋಗದ ಬಗ್ಗೆ ಅಪಾರ ಆಸಕ್ತಿ ಹೊಂದಿದ್ದ ರೂಪಾ ಸಂತಿ ಅವರು ಬಿ.ಎಡ್ ಪದವೀಧರೆ. 2019ರಲ್ಲಿ ಲಕ್ಷ್ಮೇಶ್ವರದಲ್ಲಿ ನಡೆದ ಉಚಿತ ಯೋಗ ತರಬೇತಿ ಶಿಬಿರದಲ್ಲಿ ಭಾಗವಹಿಸುವ ಮೂಲಕ ಅವರ ಯೋಗಯಾನ ಆರಂಭವಾಯಿತು. ಯೋಗಾಚಾರ್ಯ ಭವಹರಲಾಲ್ ಆರ್ಯ ಅವರ ಮಾರ್ಗದರ್ಶನದಲ್ಲಿ ಆರಂಭವಾದ ಈ



ಪಯಣ ಜೀವನದಲ್ಲಿ ಹೊಸ ತಿರುವು ನೀಡಿತು.

ನಿತ್ಯ ಯೋಗಾಭ್ಯಾಸದಿಂದ ಆರೋಗ್ಯ ಸಮಸ್ಯೆಗಳನ್ನು ನಿವಾರಿಸಿಕೊಂಡ ಅವರು, ಯೋಗದ ಬಗ್ಗೆ ಇನ್ನಷ್ಟು ಆಳವಾದ ಜ್ಞಾನ ಸಂಪಾದಿಸುವ ಸಂಕಲ್ಪದೊಂದಿಗೆ ಯೋಗ ಶಿಕ್ಷಣದತ್ತ ಹೆಜ್ಜೆ ಇಟ್ಟರು. ಗುರುಗಳಾದ ಡಾ. ಎಸ್.ಎಸ್. ಹಿರೇಮಠ ಅವರ ಮಾರ್ಗದರ್ಶನದಲ್ಲಿ ಸರ್ಟಿಫಿಕೇಟ್ ಇನ್ ಯೋಗ ಸೈನ್ಸ್ (CYS) ಹಾಗೂ ಬ್ಯಾಚುಲರ್ ಆಫ್ ನ್ಯಾಚುರೋಪತಿ ಅಂಡ್ ಯೋಗಿಕ್ ಸೈನ್ಸ್ ಪದವಿ ಪಡೆದರು. ಬಳಿಕ ಯೋಗಾಚಾರ್ಯ ಕೆ.ಎಸ್. ಪಲ್ಲೇದ ಅವರ ಮಾರ್ಗದರ್ಶನದಲ್ಲಿ ಯೋಗದಲ್ಲಿ ಪಿ.ಜಿ. ಡಿಪ್ಲೊಮಾ ಪೂರ್ಣಗೊಳಿಸಿದರು.

> "ಯೋಗ ಕೇವಲ ಜೂನ್ 21ರ ಯೋಗ ದಿನಕ್ಕೆ ಸೀಮಿತವಾಗಬಾರದು. ಅದು ಪ್ರತಿಯೊಬ್ಬರ ನಿತ್ಯ ಜೀವನದ ಭಾಗವಾಗಬೇಕು. ಯೋಗದಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ಎರಡನ್ನೂ ಕಾಪಾಡಿಕೊಳ್ಳಬಹುದು."
> **– ರೂಪಾ ಕಲ್ಮೇಶ್ವರ ಸಂತಿ, ಯೋಗ ಸಾಧಕಿ**

ಅವರ ಪರಿಶ್ರಮ, ಶಿಸ್ತು, ನಿರಂತರ ಅಭ್ಯಾಸ ಮತ್ತು ಯೋಗದ ಮೇಲಿನ ಅಪಾರ ಆಸಕ್ತಿಗೆ ಪ್ರತಿಫಲವಾಗಿ ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡದಿಂದ ಗೋಲ್ಡ್ ಮೆಡಲ್ ಲಭಿಸಿದೆ. ಇದು ಅವರ ಯೋಗ ಸಾಧನೆಗೆ ಸಂದ ಮಹತ್ವದ ಗೌರವವಾಗಿದೆ.

ಇಂದು ರೂಪಾ ಸಂತಿ ಅವರು ಲಕ್ಷ್ಮೇಶ್ವರ ಸೇರಿದಂತೆ ವಿವಿಧೆಡೆ ಉಚಿತ ಯೋಗ ತರಬೇತಿ ಶಿಬಿರಗಳನ್ನು ನಡೆಸುತ್ತಿದ್ದು, ಆರೋಗ್ಯಕರ ಸಮಾಜ ನಿರ್ಮಾಣದ ನಿಟ್ಟಿನಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಯೋಗದ ಮಹತ್ವದ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಮೂಲಕ ಅನೇಕರ ಜೀವನದಲ್ಲಿ ಆರೋಗ್ಯದ ಬೆಳಕು ಮೂಡಿಸುತ್ತಿದ್ದಾರೆ.

ರೂಪಾ ಸಂತಿ ಅವರ ಪ್ರಕಾರ, ಆಸನಗಳಿಂದ ದೈಹಿಕ ಆರೋಗ್ಯ ವೃದ್ಧಿಯಾಗುತ್ತದೆ.

ಪ್ರಾಣಾಯಾಮದಿಂದ ಉಸಿರಾಟದ ವ್ಯವಸ್ಥೆ ಸುಧಾರಿಸುತ್ತದೆ. ಧ್ಯಾನವು ಮಾನಸಿಕ ಒತ್ತಡವನ್ನು ಕಡಿಮೆ ಮಾಡಿ ನೆಮ್ಮದಿಯ ಬದುಕಿಗೆ ದಾರಿ ಮಾಡಿಕೊಡುತ್ತದೆ.

ಯೋಗವು ಯಾವುದೇ ಜಾತಿ, ಧರ್ಮ ಅಥವಾ ವರ್ಗಕ್ಕೆ ಸೀಮಿತವಾಗಿಲ್ಲ; ಅದು ವಿಶ್ವದ ಜನರಿಗೆ ಆರೋಗ್ಯಕರ ಜೀವನ ಕ್ರಮವಾಗಿದೆ ಎಂದು ಅವರು ಅಭಿಪ್ರಾಯಪಡುತ್ತಾರೆ.

ಶತಮಾನೋತ್ಸವ ಶಾಲಾ ಮಕ್ಕಳಿಗೆ ಬ್ಯಾಗ್ ವಿತರಿಸಿ ಪ್ರೋತ್ಸಾಹ

# ಶಿಕ್ಷಣ ಸೇವೆಗೆ ಕೈಜೋಡಿಸಿದ ದಾನಿಗಳು



■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಶಾಲೆಗಳು ಮತ್ತಷ್ಟು ಸಬಲೀಕರಣಗೊಳ್ಳಬೇಕಾದರೆ ಸಮುದಾಯ, ದಾನಿಗಳು ಹಾಗೂ ಸಂಘ-ಸಂಸ್ಥೆಗಳ ಸಹಭಾಗಿತ್ವ ಅತ್ಯಗತ್ಯವಾಗಿದೆ ಎಂದು ಹಿರಿಯ ಕರ ಸಲಹೆಗಾರ ಮುಕುಂದ ಪೋತ್ನೀಸ್ ಹೇಳಿದರು.

ನಗರದ ಶತಮಾನೋತ್ಸವದ ಹೆಗ್ಗಳಿಕೆಯ ಸರ್ಕಾರಿ ಗಂಡು ಮಕ್ಕಳ ಶಾಲೆ ನಂ.1ರಲ್ಲಿ ಶನಿವಾರ ಆಯೋಜಿಸಿದ್ದ ಶಾಲಾ ಮಕ್ಕಳಿಗೆ ಸ್ಕೂಲ್ ಬ್ಯಾಗ್ ವಿತರಣಾ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಸರ್ಕಾರಿ ಶಾಲೆಗಳ ಪ್ರಗತಿಗೆ ಸಮಾಜದ ಎಲ್ಲ ವರ್ಗದವರು ಕೈಜೋಡಿಸಬೇಕು ಎಂದು ಕರೆ ನೀಡಿದರು.

> "ಶಿಕ್ಷಣಕ್ಕೆ ನೀಡುವ ದಾನವೇ ಶ್ರೇಷ್ಠ ದಾನ. ಸರ್ಕಾರಿ ಶಾಲೆಗಳ ಮಕ್ಕಳ ಭವಿಷ್ಯ ಉಜ್ವಲವಾಗಬೇಕು ಎಂಬ ಉದ್ದೇಶದಿಂದ ಈ ನೆರವು ನೀಡಿದ್ದೇವೆ."
> **– ಜಯಂತಿಲಾಲ ಕವಾಡ, ದಾನಿ**

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಶಿಕ್ಷಕರಷ್ಟೇ ಅಲ್ಲ, ದಾನಿಗಳ ಸಹಕಾರವೂ ಮಹತ್ವದ್ದಾಗಿದೆ. ಎಂ.ಜಿ. ಕವಾಡ ಎಜ್ಯುಕೇಶನ್ ಟ್ರಸ್ಟ್ ವತಿಯಿಂದ ಮುಲ್ತಾನಮಲಜಿ ಗುಮಾನಮಲಜಿ ಕವಾಡ ಅವರ ಸ್ಮರಣಾರ್ಥ ಕೈಗೊಂಡಿರುವ ಈ ಕಾರ್ಯ ಇತರರಿಗೆ ಮಾದರಿಯಾಗಿದೆ ಎಂದು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಶಿಕ್ಷಣಪ್ರೇಮಿ ಹಾಗೂ ದಾನಿ ಜಯಂತಿಲಾಲ ಕವಾಡ, ಗದಗದ ಶತಮಾನೋತ್ಸವ ಶಾಲೆಗಳು ನಗರದ ಹೆಮ್ಮೆ. ಸರ್ಕಾರಿ ಹೆಣ್ಣು ಮಕ್ಕಳ ಶಾಲೆ, ಗಂಡು ಮಕ್ಕಳ ಶಾಲೆ ನಂ.1 ಹಾಗೂ ಶಾಲೆ ನಂ.11ರ ಎಲ್ಲ ವಿದ್ಯಾರ್ಥಿಗಳಿಗೆ ನಮ್ಮ ಕುಟುಂಬದ ವತಿಯಿಂದ ಸ್ಕೂಲ್ ಬ್ಯಾಗ್ ವಿತರಿಸಲಾಗಿದ್ದು, ಮಕ್ಕಳು ಅವುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಎಂ. ಮುಂದಿನಮನಿ, ಕ್ಷೇತ್ರ ಸಮನ್ವಯಾಧಿಕಾರಿ ಎಸ್.ಪಿ. ಪ್ರಭಯ್ಯನಮಠ, ಶಿಕ್ಷಣ ಸಂಯೋಜಕ ಮುರಳಿ ಸೊಲ್ಲಾಪೂರ, ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ, ಹೇಮಾದೇವಿ ಕವಾಡ, ಪೃಥ್ವಿರಾಜ್ ಬಾಫಣಾ, ಬಾವೇಶ್, ಪ್ರಿಯಲ್ ಕವಾಡ, ಶೈಲೇಶ್ ಬಾಗಮಾರ, ಪರವೀನ್ ಸಂಕಲೇಚಾ, ಮೋಹಿತ್, ಅಕ್ಷತಾ ಕವಾಡ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಮುಖ್ಯೋಪಾಧ್ಯಾಯರಾದ ಆರ್.ಬಿ. ಹೊಸಮನಿ, ಹೇಮಲತಾ ಆಸಂಗಿ, ಶಿಕ್ಷಕಿಯರಾದ ಪವಿತ್ರಾ ಹಿರೇಮಠ, ಸರ್ವಮಂಗಳಾ ಗುಜಮಾಗಡಿ ಹಾಗೂ ಶಾಲೆಯ ಪಾಲಕರು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಮೂರು ಶಾಲೆಗಳ ವತಿಯಿಂದ ದಾನಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಮುಖ್ಯೋಪಾಧ್ಯಾಯಿನಿ ವಿಜಯಾ ಜಕರಡ್ಡಿ ಸ್ವಾಗತಿಸಿದರು. ಕಾವ್ಯಾ ದಂಡಿನ ಕಾರ್ಯಕ್ರಮ ನಿರೂಪಿಸಿ, ಶಿಕ್ಷಕಿ ಸುನಂದಾ ಕುಂಟೋಜಿ ವಂದಿಸಿದರು.

ಕೋಚಿಂಗ್ ಮಾಫಿಯಾ ವಿರುದ್ಧ ಕ್ರಮ ಬಿಟ್ಟು ವಿದ್ಯಾರ್ಥಿಗಳ ಮೇಲೆ ನಿಗಾ ಏಕೆ? ಎಐಡಿಎಸ್‌ಒ ಆಕ್ರೋಶ

# ನೀಟ್ ಹಗರಣಕ್ಕೆ ವಿದ್ಯಾರ್ಥಿಗಳು ಹೊಣೆಗಾರರಲ್ಲ

AIDSO

> "ಪ್ರಶ್ನೆ ಪತ್ರಿಕೆ ಸೋರಿಕೆಯ ಹಿಂದೆ ಕೋಚಿಂಗ್ ಮಾಫಿಯಾದ ಕೈವಾಡವಿರುವುದು ಸ್ಪಷ್ಟವಾಗಿದ್ದರೂ, ವೈದ್ಯಕೀಯ ವಿದ್ಯಾರ್ಥಿಗಳನ್ನೇ ಅಪರಾಧಿಗಳಂತೆ ಬಿಂಬಿಸುವುದು ಅತ್ಯಂತ ಖಂಡನೀಯ. ವಿದ್ಯಾರ್ಥಿಗಳ ಮೇಲೆ ಕಣ್ಗಾವಲು ಇಡುವ ಎನ್‌ಎಂಸಿ ಆದೇಶವನ್ನು ಕೂಡಲೇ ಹಿಂಪಡೆಯಬೇಕು. ಪ್ರಶ್ನೆ ಪತ್ರಿಕೆ ಸೋರಿಕೆಯ ನೈತಿಕ ಹೊಣೆಯನ್ನು ಕೇಂದ್ರ ಸರ್ಕಾರವೇ ಹೊತ್ತುಕೊಳ್ಳಬೇಕು."
> **–ಎಂ. ಶಾಂತಿ,** ಜಿಲ್ಲಾ ಸಂಚಾಲಕಿ, ಎಐಡಿಎಸ್‌ಓ ಗದಗ

■ವಿಜಯಸಾಕ್ಷಿ ಸುದ್ದಿ, ಗದಗ

ನೀಟ್-ಯುಜಿ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಮೂಲ ಆರೋಪಿಗಳನ್ನು ಪತ್ತೆಹಚ್ಚುವ ಬದಲು ವೈದ್ಯಕೀಯ ವಿದ್ಯಾರ್ಥಿಗಳನ್ನೇ ಹೊಣೆಗಾರರನ್ನಾಗಿ ಬಿಂಬಿಸುತ್ತಿರುವ ಕೇಂದ್ರ ಸರ್ಕಾರ ಹಾಗೂ ರಾಷ್ಟ್ರೀಯ ವೈದ್ಯಕೀಯ ಆಯೋಗದ (ಎನ್‌ಎಂಸಿ) ನಡೆ ಖಂಡನೀಯ ಎಂದು ಎಐಡಿಎಸ್‌ಓ (ಆಲ್ ಇಂಡಿಯಾ ಡೆಮಾಕ್ರಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಷನ್) ಗದಗ ಜಿಲ್ಲಾ ಘಟಕ ಆಕ್ರೋಶ ವ್ಯಕ್ತಪಡಿಸಿದೆ.

ಈ ಕುರಿತು ಪ್ರಕಟಣೆ ನೀಡಿರುವ ಜಿಲ್ಲಾ ಸಂಚಾಲಕಿ ಎಂ. ಶಾಂತಿ, ನೀಟ್-ಯುಜಿ ಪ್ರಶ್ನೆ ಪತ್ರಿಕೆ ಸೋರಿಕೆ ಹಿನ್ನೆಲೆಯಲ್ಲಿ ಮರುಪರೀಕ್ಷೆ ಘೋಷಣೆಯಾದ ಬಳಿಕ ದೇಶದಲ್ಲಿ ಹಲವಾರು ವಿದ್ಯಾರ್ಥಿಗಳು ಮಾನಸಿಕ ಒತ್ತಡಕ್ಕೆ ಒಳಗಾಗಿದ್ದು, ಆತ್ಮಹತ್ಯೆ ಪ್ರಕರಣಗಳೂ ವರದಿಯಾಗಿವೆ. ಆದರೂ ಕೇಂದ್ರ ಸರ್ಕಾರ ಈ ಪ್ರಕರಣದಲ್ಲಿ ತನ್ನ ನೈತಿಕ ಹೊಣೆಗಾರಿಕೆಯನ್ನು ಒಪ್ಪಿಕೊಳ್ಳದೆ ಜವಾಬ್ದಾರಿಯಿಂದ ತಪ್ಪಿಸಿಕೊಳ್ಳಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ್ದಾರೆ.

ಪ್ರಶ್ನೆ ಪತ್ರಿಕೆ ಸೋರಿಕೆಯ ಮೂಲವನ್ನು ಪತ್ತೆಹಚ್ಚಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಜರುಗಿಸುವ ಬದಲು, ಟೆಲಿಗ್ರಾಂ ನಿಷೇಧ ಸೇರಿದಂತೆ ವಿವಿಧ ಕ್ರಮಗಳ ಮೂಲಕ ವಿಷಯವನ್ನು ಬೇರೆಡೆಗೆ ತಿರುಗಿಸುವ ಪ್ರಯತ್ನ ನಡೆಸಲಾಗುತ್ತಿದೆ ಎಂದು ದೂರಿದರು.

ಇದೇ ವೇಳೆ, ಕೋಚಿಂಗ್ ಮಾಫಿಯಾದ ಹಿಡಿತದಲ್ಲಿ ಸಿಲುಕಿರುವ ಶಿಕ್ಷಣ ವ್ಯವಸ್ಥೆಯನ್ನು ಸುಧಾರಿಸಲು ಯಾವುದೇ ಪರಿಣಾಮಕಾರಿ ಕ್ರಮ ಕೈಗೊಳ್ಳದ ಕೇಂದ್ರ ಸರ್ಕಾರ, ಇದೀಗ ರಾಷ್ಟ್ರೀಯ ವೈದ್ಯಕೀಯ ಆಯೋಗದ ಮೂಲಕ ವೈದ್ಯಕೀಯ ವಿದ್ಯಾರ್ಥಿಗಳ ಮೇಲೆ ಅನುಮಾನದ ದೃಷ್ಟಿ ಹರಿಸುತ್ತಿದೆ ಎಂದು ಎಐಡಿಎಸ್‌ಓ ಟೀಕಿಸಿದೆ.

ನೀಟ್-ಯುಜಿ ಮರುಪರೀಕ್ಷೆಯ ಹಿನ್ನೆಲೆಯಲ್ಲಿ ದೇಶದ ವೈದ್ಯಕೀಯ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ರಜೆ ನೀಡಬಾರದು ಹಾಗೂ ಪರೀಕ್ಷೆಯ ಪಾವಿತ್ರ್ಯ ಕಾಪಾಡುವ ಹೆಸರಿನಲ್ಲಿ ಅವರ ಮೇಲೆ ನಿಗಾ ವಹಿಸಬೇಕು ಎಂದು ಎನ್‌ಎಂಸಿ ಹೊರಡಿಸಿರುವ ಸೂಚನೆ ವಿದ್ಯಾರ್ಥಿ ಸಮುದಾಯವನ್ನು ಅಪರಾಧಿಗಳಂತೆ ಕಾಣುವ ಮನೋಭಾವವನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಲಾಗಿದೆ.

ಪ್ರಶ್ನೆ ಪತ್ರಿಕೆ ಸೋರಿಕೆಯ ಹಿಂದೆ ಬೃಹತ್ ಕೋಚಿಂಗ್ ಮಾಫಿಯಾದ ಕೈವಾಡವಿರುವುದು ಬಹಿರಂಗ ಸತ್ಯವಾಗಿದ್ದರೂ, ಅದರ ವಿರುದ್ಧ ಕ್ರಮ ಜರುಗಿಸುವ ಬದಲು ವೈದ್ಯಕೀಯ ವಿದ್ಯಾರ್ಥಿಗಳನ್ನು ಗುರಿಯಾಗಿಸಲಾಗುತ್ತಿದೆ. ಇದು ವಿದ್ಯಾರ್ಥಿಗಳ ಆತ್ಮಸ್ಥೈರ್ಯ ಕುಗ್ಗಿಸುವ ಮತ್ತು ಶಿಕ್ಷಣ ಕ್ಷೇತ್ರದ ಮೇಲಿನ ವಿಶ್ವಾಸಕ್ಕೆ ಧಕ್ಕೆ ತರುವ ಕ್ರಮವಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಎನ್‌ಎಂಸಿ ಹೊರಡಿಸಿರುವ ಈ ಆದೇಶವನ್ನು ತಕ್ಷಣ ಹಿಂಪಡೆಯಬೇಕು. ಜೊತೆಗೆ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದ ಸಂಪೂರ್ಣ ಹೊಣೆಯನ್ನು ಕೇಂದ್ರ ಸರ್ಕಾರವೇ ಹೊತ್ತುಕೊಂಡು ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಎಐಡಿಎಸ್‌ಓ ಆಗ್ರಹಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka